ಸಂಪುಟ : 10 ಸಂಚಿಕೆ: 161 ಪುಟ : 4+2 ಬೆಲೆ: 3.00 ಶುಕ್ರವಾರ ಆಗಸ್ಟ್ 01 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 161 Pages : 4+2 Price : 3.00 Friday August 01 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಯೂರಿಯಾ ಗೊಬ್ಬರಕ್ಕಾಗಿ ಬಿಜೆಪಿಯಿಂದ ಗಾಂಧಿ ವೃತ್ತದಲ್ಲಿ ಸಾಂಕೇತಿಕ ರಸ್ತೆ ತಡೆ, ಪ್ರತಿಭಟನೆ

# ಕಾಂಗ್ರೆಸ್‌ನ ಹಗ್ಗ ಜಗ್ಗಾಟದ ಪರಿಣಾಮ ರೈತರ ಮೇಲೆ



■ವಿಜಯಸಾಕ್ಷಿ ಸುದ್ದಿ, ಗದಗ

ಕೇಂದ್ರ ಸರ್ಕಾರ ಸಾಕಷ್ಟು ಯೂರಿಯಾ ಗೊಬ್ಬರವನ್ನು ರಾಜ್ಯಕ್ಕೆ ಪೂರೈಕೆ ಮಾಡಿದರೂ ಅದನ್ನು ರೈತರಿಗೆ ಸಮರ್ಪಕವಾಗಿ ವಿತರಿಸುತ್ತಿಲ್ಲ ಎಂದು ಆರೋಪಿಸಿ ಗದಗ ಶಹರ, ಗ್ರಾಮೀಣ ಮಂಡಲ, ರೈತ ಮೋರ್ಚಾ ವತಿಯಿಂದ ರಾಜ್ಯ ಸರ್ಕಾರದ ವಿರುದ್ಧ ಗದಗ ನಗರದ ಗಾಂಧಿ ವೃತ್ತದಲ್ಲಿ ಸಾಂಕೇತಿಕ ರಸ್ತೆ ತಡೆ ನಡೆಸಿ, ಪ್ರತಿಭಟನೆ ನಡೆಸಿದರು.

ಈ ಸಂದರ್ಭದಲ್ಲಿ ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ ಮಾತನಾಡಿ, ವಿಜ್ಞಾನಿಗಳು ಮಳೆ ಎಷ್ಟು ಆಗುತ್ತದೆ ಎಂಬುದರ ಬಗ್ಗೆ ಮೊದಲೇ ರಾಜ್ಯ ಸರ್ಕಾರಕ್ಕೆ ತಿಳಿಸಿದರೂ ಕೃಷಿ ಸಚಿವ ಚಲುವರಾಯಸ್ವಾಮಿರವರು ಯಾವುದೇ ಮುಂಜಾಗ್ರತಾ ಕ್ರಮವನ್ನು ಕೈಗೊಳ್ಳದೆ ಇರುವುದರಿಂದ ಗೊಬ್ಬರದ ಕೊರತೆಯಾಗಿದೆ. ರಾಜ್ಯದಲ್ಲಿ ಅಧಿಕಾರಕ್ಕಾಗಿ ಮುಖ್ಯಮಂತ್ರಿ, ಉಪಮುಖ್ಯಮಂತ್ರಿಗಳ ನಡುವೆ ಹಗ್ಗ ಜಗ್ಗಾಟ ನಡೆದಿದ್ದು, ಇದರಿಂದ ಚಿಕ್ಕ ಹಾಗೂ ಮಧ್ಯಮ ರೈತರಿಗೆ ಬಹಳಷ್ಟು ತೊಂದರೆಯಾಗಿದೆ ಎಂದು ಆರೋಪಿಸಿದರು.

ಜಿಲ್ಲಾ ವಕ್ತಾರ ಎಂ.ಎಂ. ಹಿರೇಮಠ ಮಾತನಾಡಿ, ಕೇಂದ್ರ ಸರ್ಕಾರ ಮುಂಗಾರು ಹಂಗಾಮಿಗಾಗಿ ಸಾಕಷ್ಟು ಯೂರಿಯಾ ಗೊಬ್ಬರವನ್ನು ಪೂರೈಸಿದರೂ ರಾಜ್ಯ ಸರ್ಕಾರ ಅದನ್ನು ಸರಿಯಾಗಿ ರೈತರಿಗೆ ಮುಟ್ಟಿಸದೆ ಅನ್ಯಾಯವೆಸಗಿದೆ. ಸಣ್ಣ ಹಾಗೂ ಅತೀ ಸಣ್ಣ ರೈತರಿಗೆ ಇದರಿಂದ ತೊಂದರೆಯಾಗುತ್ತಿದೆ. ಈ ವರ್ಷ ಮುಂಗಾರು ಹಂಗಾಮಿನಲ್ಲಿ ಸಾಕಷ್ಟು ಮಳೆಯಾಗಿದ್ದು, ಅದಕ್ಕೆ ತಕ್ಕಂತೆ ಗೊಬ್ಬರದ ದಾಸ್ತಾನು ಇಡದೆ ರೈತರಿಗೆ ತೊಂದರೆ ಮಾಡುತ್ತಿದ್ದಾರೆ. ಹಿಂದೆ ಯಡಿಯೂರಪ್ಪನವರು ಆಡಳಿತದಲ್ಲಿದ್ದಾಗ ಗೊಬ್ಬರ ಖರೀದಿಗಾಗಿ 1 ಸಾವಿರ ಕೋಟಿ ರೂ ಆವರ್ತ ನಿಧಿ ಇಟ್ಟಿದ್ದರು. ಆದರೆ ಈಗಿನ ಕಾಂಗ್ರೆಸ್ ಸರ್ಕಾರದಲ್ಲಿ ಕೇವಲ 400 ಕೋಟಿ ರೂ ಇಟ್ಟಿದ್ದರಿಂದ ಹೆಚ್ಚಿನ ಗೊಬ್ಬರವನ್ನು ದಾಸ್ತಾನು ಮಾಡಲು ರಾಜ್ಯ ಸರ್ಕಾರ ಸಂಪೂರ್ಣ ವಿಫಲವಾಗಿದೆ ಎಂದು ಆರೋಪಿಸಿದರು.

ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ, ಮಾಜಿ ಜಿಲ್ಲಾಧ್ಯಕ್ಷ ಎಂ.ಎಸ್. ಕರೀಗೌಡ್ರ, ರೈತ ಮೋರ್ಚಾ ಜಿಲ್ಲಾಧ್ಯಕ್ಷ ಬಸವರಾಜ ಇಟಗಿ, ಗದಗ ನಗರ ಮಂಡಲ ಅಧ್ಯಕ್ಷ ಸುರೇಶ ಮರಳಪ್ಪನವರ, ಗ್ರಾಮೀಣ ಮಂಡಲ ಅಧ್ಯಕ್ಷ ಬೂದಪ್ಪ ಹಳ್ಳಿ, ಪ್ರಮುಖರಾದ ರವಿ ದಂಡಿನ, ಭದ್ರೇಶ ಕುಸ್ಲಾಪೂರ, ಬಸವಣ್ಣೆಪ್ಪ ಚಿಂಚಲಿ, ಜಗನ್ನಾಥಸಾ ಭಾಂಡಗೆ, ನಿರ್ಮಲಾ ಕೊಳ್ಳಿ, ನಗರ ರೈತ ಮೋರ್ಚಾ ಅಧ್ಯಕ್ಷ ಶಂಕರ ಕರಬಿಷ್ಠಿ, ಗ್ರಾಮೀಣ ಅಧ್ಯಕ್ಷ ಸಿದ್ದಪ್ಪ ಜೊಂಡಿ ಸಂದರ್ಭೋಚಿತವಾಗಿ ಮಾತನಾಡಿದರು.

ಪ್ರತಿಭಟನೆಯಲ್ಲಿ ಶ್ರೀಪತಿ ಉಡುಪಿ, ಸಿದ್ದು ಪಲ್ಲೇದ, ಅನಿಲ ಅಬ್ಬಿಗೇರಿ, ರಾಘವೇಂದ್ರ ಯಳವತ್ತಿ, ನಿಂಗಪ್ಪ ಮಣ್ಣೂರ, ಚಂದ್ರು ತಡಸದ, ನಾಗರಾಜ ತಳವಾರ, ಶಶಿಧರ ದಿಂಡೂರ, ಮಹೇಶ ಶಿರಹಟ್ಟಿ, ರಾಜು ಕುಲಕರ್ಣಿ, ಉಷಾ ದಾಸರ, ವಿದ್ಯಾವತಿ ಗಡಗಿ, ಲಕ್ಷ್ಮೀ ಕಾಕಿ, ವಿಜಯಲಕ್ಷ್ಮೀ ಮಾನ್ವಿ, ರೇಖಾ ಬಂಗಾರಶೆಟ್ಟರ, ಪದ್ಮಿನಿ ಮುತ್ತಲದಿನ್ನಿ, ವಾಯ್.ಪಿ. ಅಡ್ನೂರ, ▶▶3ನೇ ಪುಟಕ್ಕೆ

> ಕೇಂದ್ರ ಸರ್ಕಾರ ಪೂರೈಸಿದ ಯೂರಿಯಾ ಗೊಬ್ಬರವನ್ನು ಕಾಂಗ್ರೆಸ್ ಪುಢಾರಿಗಳು ಕಾಳಸಂತೆಯಲ್ಲಿ ಮಾರಾಟ ಮಾಡಿದ್ದಾರೆ. ಶ್ರೀಮಂತ ಕಾಂಗ್ರೆಸ್ ಪರ ರೈತರ ಮನೆಯಲ್ಲಿ ನೂರಾರು ಚೀಲ ಯೂರಿಯಾ ಗೊಬ್ಬರ ದಾಸ್ತಾನಿದೆ. ಇನ್ನಾದರೂ ರಾಜ್ಯ ಸರ್ಕಾರ ಎಚ್ಚೆತ್ತು ಕೇಂದ್ರ ಸರ್ಕಾರ ಬಿಡುಗಡೆ ಮಾಡಿದ ಹೆಚ್ಚುವರಿ ಗೊಬ್ಬರವನ್ನು ರೈತರಿಗೆ ತಲುಪಿಸಬೇಕು.
>
> **– ರಾಜು ಕುರುಡಗಿ.**
> ಬಿಜೆಪಿ ಗದಗ ಜಿಲ್ಲಾಧ್ಯಕ್ಷ.

## ಇಂದು ವ್ಯಸನ ಮುಕ್ತ ದಿನಾಚರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ, ಬೆಂಗಳೂರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಗದಗ ಇವರ ಸಂಯುಕ್ತ ಆಶ್ರಯದಲ್ಲಿ ಡಾ. ಮಹಾಂತ ಶಿವಯೋಗಿಗಳ ಜನ್ಮ ದಿನಾಚರಣೆ ಅಂಗವಾಗಿ ವ್ಯಸನ ಮುಕ್ತ ದಿನಾಚರಣೆ ಕಾರ್ಯಕ್ರಮವನ್ನು ಆಗಸ್ಟ್ 1 ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಹಮ್ಮಿಕೊಳ್ಳಲಾಗಿದೆ.

ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು.

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಅವರು ಕಾರ್ಯಕ್ರಮ ಉದ್ಘಾಟಿಸುವರು.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ ಸಂಸದರಾದ ಬಸವರಾಜ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್ , ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್.ಪಾಟೀಲ, ಸಂಸದ ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ.ಸಂಕನೂರ, ಪ್ರದೀಪ್ ಶೆಟ್ಟರ್, ಶಾಸಕರಾದ ಸಿ.ಸಿ.ಪಾಟೀಲ, ಡಾ.ಚಂದ್ರು ಲಮಾಣಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕಬರಸಾಬ ಬಬರ್ಚಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಬಿ.ಬಿ.ಅಸೂಟಿ ಆಗಮಿಸುವರು.

▶▶3ನೇ ಪುಟಕ್ಕೆ

### ಹೇಮರಡ್ಡಿ ಮಲ್ಲಮ್ಮ ದೇವಸ್ಥಾನ ನಿರ್ಮಾಣಕ್ಕೆ ಭೂಮಿ ಪೂಜೆ ನೆರವೇರಿಸಿದ ಶಾಸಕ ಜಿ.ಎಸ್. ಪಾಟೀಲ

# ಮೋಕ್ಷದ ಮಾರ್ಗ ತೋರಿದ ಮಹಾಸಾಧ್ವಿ ಮಲ್ಲಮ್ಮ



■ವಿಜಯಸಾಕ್ಷಿ ಸುದ್ದಿ, ಡಂಬಳ

ದಾನ, ದಾಸೋಹ ಹಾಗೂ ನಿಸ್ವಾರ್ಥ ಭಕ್ತಿಗೆ ಹೆಸರಾದ ಹೇಮರಡ್ಡಿ ಮಲ್ಲಮ್ಮ ಮೋಕ್ಷದ ಮಾರ್ಗ ತೋರಿದ ಮಹಾಸಾಧ್ವಿ. ಸಮಾಜ ಸುಧಾರಣೆಯಲ್ಲಿ ಕ್ರಾಂತಿ ಮಾಡಿದ ಅವರನ್ನು ಕೇವಲ ಒಂದು ಜಾತಿಗೆ ಸೀಮಿತಗೊಳಿಸಬಾರದು. ಅವರ ವಿಚಾರ ಮತ್ತು ತತ್ವಗಳನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಮುಂದಿನ ಪೀಳಿಗೆಗೆ ಆದರ್ಶಪ್ರಾಯರಾಗಬೇಕು ಎಂದು ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಡಂಬಳ ಹೋಬಳಿಯ ಹಳ್ಳಿಗುಡಿ ಗ್ರಾಮದಲ್ಲಿ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ದೇವಸ್ಥಾನ ಕಟ್ಟಡ ಭೂಮಿ ಪೂಜಾ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಹೇಮರೆಡ್ಡಿ ಮಲ್ಲಮ್ಮ ಸೂರ್ಯ–ಚಂದ್ರರಿರುವವರೆಗೂ ಸಮಾಜಕ್ಕೆ ಅನ್ನದ ಕೊರತೆ ಬರಬಾರದು ಎಂದು ಶಿವನಿಂದ ವರ ಪಡೆದ ಮಹಾಮಾತೆ. ಅವರ ತತ್ವಾದರ್ಶಗಳನ್ನು ಎಲ್ಲರೂ ಪಾಲಿಸಬೇಕು ಎಂದು ಹೇಳಿದರು.

ವೇ.ಮೂ. ಶಂಕ್ರಯ್ಯ ಹಿರೇಮಠ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಅಬ್ಬಿಗೇರಿಯ ಹೇಮರಡ್ಡಿ ಮಲ್ಲಮ್ಮ ಸದ್ಬೋಧನಾ ಬಸವರಾಜ ಶ್ರೀಗಳು, ಅನ್ನಪೂರ್ಣ ಜಿ.ಪಾಟೀಲ, ಮುಂಡರಗಿ ತಾಲೂಕು ಕಾಂಗ್ರೆಸ್ ಅಧ್ಯಕ್ಷ ಡಿ.ಡಿ. ಮೋರನಾಳ, ಗೋಣಿಬಸಪ್ಪ ಕೊರ್ಲಹಳ್ಳಿ, ಎಫ್.ಎಸ್. ಗೊಡಿ, ಶಂಕ್ರಪ್ಪ ಅಂದಾನಪ್ಪ ಚನ್ನಳ್ಳಿ, ಹನಮಂತಪ್ಪ ಗಡ್ಡದ, ಬಿ.ಎಸ್. ಮೇಟಿ, ಗುರಪ್ಪ ಕುರ್ತಕೋಟಿ, ಚಂದ್ರಪ್ಪ ಚನ್ನಳ್ಳಿ, ಶೋಭಾ ಮೇಟಿ, ಕುಮಾರ ಗಡಗಿ, ಜಗದೀಶ ಅವರಡ್ಡಿ, ಸುರೇಶ ಶಿರೋಳ, ಬಸವರಡ್ಡಿ ಬಂಡಿಹಾಳ, ಕುಮಾರ ಗಡಗಿ, ಭೀಮರಡ್ಡಿ ರಡ್ಡೇರ, ಹೇಮರಡ್ಡಿ ಮುಂಡರಗಿ, ಮಹೇಶ ಗಡಗಿ, ವಿ.ಟಿ. ಮೇಟಿ, ಗುರುಪುತ್ರಪ್ಪ ಸಂಶಿ, ದೇವರಡ್ಡಿ ಕಾತರಕಿ, ವಿರೂಪಾಕ್ಷಗೌಡ ಮರಿಗೌಡ್ರ, ಗ್ರಾಮದ ಹಿರಿಯರು, ಸಮಿತಿಯ ಸದಸ್ಯರು ಇದ್ದರು.

> ನಾಡೋಜ ಜಗದ್ಗುರು ಡಾ. ಅನ್ನದಾನೀಶ್ವರ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸಿ ಮಾತನಾಡಿ, ಶ್ರೀಮಂತಿಕೆ ಅಂದರೆ ಹಣ, ಚಿನ್ನವಲ್ಲ. ಪರಸ್ಪರ ಪ್ರೀತಿ ಗೌರವದಿಂದ ಕಾಣುವುದು. ಮಾನವೀಯ ಮೌಲ್ಯಗಳನ್ನು ಅಳವಡಿಸಿಕೊಂಡು, ಎಲ್ಲಾ ಸಮುದಾಯಗಳೊಂದಿಗೆ ಸಹಬಾಳ್ವೆಯಿಂದ ಬದುಕುವಂತೆ ಮಲ್ಲಮ್ಮ ಬೋಧಿಸಿದವರು. ಅವರು ಹಾಕಿಕೊಟ್ಟಿರುವ ಆದರ್ಶದಲ್ಲಿ ನಡೆಯಬೇಕು ಮತ್ತು ಮಹಿಳೆಯರು ದೇವಸ್ಥಾನ ಕಟ್ಟಲು ತಮ್ಮ ಸಹಕಾರವನ್ನು ನೀಡಬೇಕು ಎಂದು ಹೇಳಿದರು.

### ಅನುದಾನಿತ ಐಟಿಐ ನೌಕರರ ಸಮಗ್ರ ಬೇಡಿಕೆ ಈಡೇರಿಸಲು ಸಚಿವ ಡಾ. ಶರಣ ಪ್ರಕಾಶ ಪಾಟೀಲ ಒಪ್ಪಿಗೆ

# ಒಂದೆರಡು ತಿಂಗಳ ಒಳಗಾಗಿ ಸೂಕ್ತ ಆದೇಶ



■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದಲ್ಲಿ ಅನುದಾನಿತ ಕೈಗಾರಿಕಾ ತರಬೇತಿ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸುಮಾರು 2 ಸಾವಿರ ಕಿರಿಯ ತರಬೇತಿ ಅಧಿಕಾರಿಗಳು, ತರಬೇತಿ ಅಧಿಕಾರಿಗಳು ಮತ್ತು ಬೋಧಕೇತರ ಸಿಬ್ಬಂದಿಗೆ ಸೇವಾ ಭದ್ರತೆ ಒದಗಿಸುವುದು, ಸ್ವಯಂ ನಿವೃತ್ತಿ ಹೊಂದಲು ಅನುಮತಿ ನೀಡುವುದು, ನಿವೃತ್ತಿ ಸಂದರ್ಭದಲ್ಲಿ ನೀಡಬೇಕಾದ ಅಂತಿಮ ರಜೆ ನಗದೀಕರಣ ಮುಂತಾದ ಎಲ್ಲ ಬೇಡಿಕೆಗಳಿಗೆ ಒಂದೆರಡು ತಿಂಗಳ ಒಳಗಾಗಿ ಸೂಕ್ತ ಆದೇಶ ಜಾರಿ ಮಾಡುವುದಾಗಿ ▶▶3ನೇ ಪುಟಕ್ಕೆ

> ಸಚಿವರು ಮಾತನಾಡಿ, ಅನುದಾನಿತ ಕೈಗಾರಿಕಾ ತರಬೇತಿ ಕೇಂದ್ರಗಳ ಸಿಬ್ಬಂದಿಗೆ ಒದಗಿಸಬೇಕಾದ ಎಲ್ಲಾ ಸೇವಾ ಭದ್ರತೆ ಹಾಗೂ ಸೇವಾ ಸೌಲಭ್ಯಗಳನ್ನು ಒದಗಿಸಲು ಅನುದಾನ ಸಂಹಿತೆಗೆ ಈಗಾಗಲೇ ಪರಿಷ್ಕರಣೆ ಮಾಡಿ ಒಪ್ಪಿಗೆ ನೀಡಿದ್ದು, ಒಂದೆರಡು ತಿಂಗಳಿನಲ್ಲಿ ಆದೇಶ ಜಾರಿಗೊಳಿಸುವುದಾಗಿ ತಿಳಿಸಿದ್ದಾರೆ. ಅಲ್ಲದೇ, ಅನುದಾನಿತ ಕೈಗಾರಿಕಾ ತರಬೇತಿ ಕೇಂದ್ರಗಳಲ್ಲಿ ನಿವೃತ್ತಿ ಹಾಗೂ ನಿಧನದಿಂದ ತೆರವಾಗಿರುವ ಹುದ್ದೆಗಳನ್ನು ತುಂಬಿಕೊಳ್ಳಲು ಅನುಮತಿ ನೀಡಲು ಪರಿಶೀಲಿಸುವುದಾಗಿ ಭರವಸೆ ನೀಡಿದ್ದಾರೆ.

## ಪ್ರತಿಬಂಧಕಾಜ್ಞೆ ಜಾರಿ

■ವಿಜಯಸಾಕ್ಷಿ ಸುದ್ದಿ, ಗದಗ

ರಾಷ್ಟ್ರೀಯ ವೈದ್ಯಕೀಯ ವಿಜ್ಞಾನಗಳ ಪರೀಕ್ಷಾ ಮಂಡಳಿ , ನವದೆಹಲಿ ಇವರ ವತಿಯಿಂದ ನೀಟ್ ಪಿಜಿ 2025 ಪರೀಕ್ಷೆಗಳು ಆಗಸ್ಟ್ 3 ರಂದು ಬೆ 9 ಗಂಟೆಯಿಂದ ಮಧ್ಯಾಹ್ನ 12 ಗಂಟೆಯವರೆಗೆ ನಡೆಯಲಿವೆ. ಪರೀಕ್ಷಾ ಸಮಯದಲ್ಲಿ ನಕಲು ಮಾಡುವುದು, ಪರೀಕ್ಷಾರ್ಥಿಗಳ ಬದಲು ಬೇರೆಯವರು ಪರೀಕ್ಷೆಗೆ ಹಾಜರಾಗುವುದು ಮುಂತಾದ ಅವ್ಯವಹಾರ ತಡೆಗಟ್ಟಲು ಮತ್ತು ಪರೀಕ್ಷಾ ಕೇಂದ್ರಗಳಲ್ಲಿ ಶಿಸ್ತು ಮತ್ತು ಶಾಂತಿ ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಜಿಲ್ಲೆಯ ಲಕ್ಷ್ಮೇಶ್ವರದ ಶ್ರೀಮತಿ ಕಮಲಾ ಮತ್ತು ಶ್ರೀ ವೆಂಕಪ್ಪ ಎಂ. ಅಗಡಿ ಕಾಲೇಜ್ ಆಫ್ ಇಂಜನೀಯರಿಂಗ್ ಆ್ಯಂಡ್ ಟೆಕ್ನಾಲಜಿ, ಸವಣೂರ ರೋಡ್, ಲಕ್ಷ್ಮೇಶ್ವರ ಈ ಪರೀಕ್ಷಾ ಕೇಂದ್ರದ ಸುತ್ತಲೂ 200 ಮೀಟರ್ ಪ್ರದೇಶವನ್ನು ನಿಷೇಧಿತ ಪ್ರದೇಶವನ್ನಾಗಿ ಘೋಷಿಸಲಾಗಿದೆ.

ಪರೀಕ್ಷಾ ಕೇಂದ್ರದ ಸುತ್ತಲೂ 200 ಮೀಟರ್ ಪರಿಮಿತಿಯೊಳಗೆ ಆಗಸ್ಟ್ 3 ರಂದು ಬೆಳಿಗ್ಗೆ 6 ಗಂಟೆಯಿಂದ ಮಧ್ಯಾಹ್ನ 2.30 ಗಂಟೆಯವರೆಗೆ ಪ್ರತಿಬಂಧಕಾಜ್ಞೆ ಜಾರಿಗೊಳಿಸಲಾಗಿದೆ. ಪರೀಕ್ಷಾರ್ಥಿಗಳು ಹಾಗೂ ಪರೀಕ್ಷೆಯಲ್ಲಿ ಕಾರ್ಯ ನಿರ್ವಹಿಸುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಹೊರತುಪಡಿಸಿ ಇತರ ಯಾವುದೇ ವ್ಯಕ್ತಿ ಅಥವಾ ಐದು ಐದಕ್ಕಿಂತ ಹೆಚ್ಚು ಜನರು ▶▶3ನೇ ಪುಟಕ್ಕೆ



**ಬೆಂಗಳೂರು:** ಗುರುವಾರ ಗದಗ ಜಿಲ್ಲೆಯ ಉಸ್ತುವಾರಿ ಸಚಿವರಾದ ಎಚ್ ಕೆ ಪಾಟೀಲ ಹಾಗೂ ಶಾಸಕ ಜಿ ಎಸ್ ಪಾಟೀಲ ಅವರ ಜೊತೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸುದೀರ್ಘ ಸಭೆ ನಡೆಸಿ, ಜಿಲ್ಲಾ ವ್ಯಾಪ್ತಿಯಲ್ಲಿ ವಿವಿಧ ಇಲಾಖೆಗಳಡಿ ಹಮ್ಮಿಕೊಳ್ಳಲಾಗಿರುವ ಅಭಿವೃದ್ಧಿ ಯೋಜನೆಗಳ ಪ್ರಗತಿ ಪರಿಶೀಲನೆ ನಡೆಸಿ, ಕೇಂದ್ರ ಸರ್ಕಾರದ ಅಸಹಕಾರದಿಂದಾಗಿ ರಾಜ್ಯದಲ್ಲಿ ತಲೆದೋರಿರುವ ರಸಗೊಬ್ಬರ ಕೊರತೆಯ ಬಗ್ಗೆ ಚರ್ಚಿಸಿ, ರಾಜ್ಯಕ್ಕೆ ರಸಗೊಬ್ಬರ ಪೂರೈಕೆಯಲ್ಲಿ ಆಗಿರುವ ಅನ್ಯಾಯವನ್ನು ಜಿಲ್ಲೆಯ ಜನರಿಗೆ ಅರ್ಥಮಾಡಿಸುವಂತೆ ಸಲಹೆ ನೀಡಿದರು.



## ಬಳ್ಳಾರಿಯಲ್ಲಿ SBI ಎಟಿಎಂ ದೋಚಿದ ಖದೀಮರು!



■ವಿಜಯಸಾಕ್ಷಿ ಸುದ್ದಿ, ಬಳ್ಳಾರಿ

ಬಳ್ಳಾರಿ ನಗರದ ಎಸ್‌ಬಿಐನಲ್ಲಿ ದರೋಡೆ ಆಗಿದೆ. ಬಳ್ಳಾರಿ ನಗರದ ತಾಳೂರು ರಸ್ತೆಯಲ್ಲಿ ಇರುವ ಎಸ್.ಬಿ.ಐ ಎ.ಟಿ.ಎಂನಲ್ಲಿ ಕಳ್ಳತನವಾಗಿದ್ದು, ರಾತ್ರಿ ಸಮಯದಲ್ಲಿ ಈ ದ-ರೋಡೆ ನಡೆದಿದೆ ಎನ್ನಲಾಗಿದೆ.

ತಾಳೂರು ರಸ್ತೆಯಲ್ಲಿ ಎಲ್ಲೂ ಸಿಸಿ ಕ್ಯಾಮರಾಗಳಿಲ್ಲ. ಇದನ್ನೇ ಬಂಡವಾಳವನ್ನಾಗಿ ಮಾಡಿಕೊಂಡ ಖದೀಮರು, ಕಳ್ಳತನ ಮಾಡಿರುವ ಶಂಕೆ ವ್ಯಕ್ತವಾಗಿದೆ. ಮಾಹಿತಿ ಆಧರಿಸಿ ಸ್ಥಳಕ್ಕೆ ಪೊಲೀಸರು ಆಗಮಿಸಿ, ಎ.ಟಿ.ಎಂ ಕೇಂದ್ರದಲ್ಲಿ ಬೆರಳಚ್ಚು ತಜ್ಞರಿಂದ ಪರಿಶೀಲನೆ ನಡೆಸಲಾಯಿತು.

ಕಳೆದ ತಿಂಗಳಿನಿಂದ ಬಳ್ಳಾರಿ ನಗರದಲ್ಲಿ ಗ್ಯಾಂಗ್ ಓಡಾಡುತ್ತಿದ್ದ ಬಗ್ಗೆ ಪೊಲೀಸರಿಗೆ ಮಾಹಿತಿ ಲಭ್ಯವಾಗಿದೆ.

ಪೊಲೀಸರಿಗೆ ಮಾಹಿತಿ ಇದ್ರೂ ಕಳ್ಳತನ ಆಗಿರೋದಕ್ಕೆ ಸ್ಥಳೀಯರು ಆಕ್ರೋಶ ಹೊರ ಹಾಕಿದ್ದಾರೆ. ನಗರದಲ್ಲಿ ಆಯಕಟ್ಟಿನ ಸ್ಥಳಗಳಲ್ಲಿ ಸಿಸಿ ಕ್ಯಾಮರಾಗಳ ಅಳವಡಿಕೆ ಮಾಡುವಂತೆ ಸಾರ್ವಜನಿಕರು ಒತ್ತಾಯ ಮಾಡಿದ್ದಾರೆ.

### ಸ್ವಾತಂತ್ರ್ಯೋತ್ಸವದ ಮುನ್ನಾದಿನ ಸಾಂಸ್ಕೃತಿಕ ಯುವ ಸಂಭ್ರಮ ಕಾರ್ಯಕ್ರಮ

# ಸ್ವಾತಂತ್ರ್ಯೋತ್ಸವವನ್ನು ಗೌರವಯುತವಾಗಿ ಆಚರಿಸೋಣ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಪ್ರಸಕ್ತ ಸಾಲಿನ ಸ್ವಾತಂತ್ರ್ಯೋತ್ಸವವನ್ನು ಅರ್ಥಪೂರ್ಣವಾಗಿ ಆಚರಿಸಲು ಜಿಲ್ಲಾಡಳಿತ ನಿರ್ಧರಿಸಿದ್ದು, ಯುವ ಸಮೂಹದಲ್ಲಿ ಸ್ವಾತಂತ್ರ್ಯೋತ್ಸವದ, ದೇಶ ಪ್ರೇಮವನ್ನು ಬೆಳೆಸುವ ಮತ್ತು ಸ್ವಾತಂತ್ರ್ಯ ಘಳಿಗೆಯನ್ನು ಸ್ಮರಿಸುವ ಉದ್ದೇಶದಿಂದ ಅವಳಿ ನಗರದ ವಿವಿಧ ಪದವಿ ಕಾಲೇಜುಗಳು, ವಿಶ್ವವಿದ್ಯಾಲಯಗಳು, ಸ್ವಾಯತ್ತ ವಿಶ್ವವಿದ್ಯಾಲಯಗಳು ತಮ್ಮ ವಿದ್ಯಾರ್ಥಿಗಳ ಮೂಲಕ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನೀಡಬೇಕೆಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಹೇಳಿದರು.

ಅವರು ಬುಧವಾರ ಸಂಜೆ ಜಿಲ್ಲಾಧಿಕಾರಿಗಳ ಕಚೇರಿ ನೂತನ ಸಭಾಗಂಣದಲ್ಲಿ ಸ್ವಾತಂತ್ರ್ಯ ದಿನಾಚರಣೆ ಹಾಗೂ ಸಾಂಸ್ಕೃತಿಕ ಯುವ ಸಂಭ್ರಮ ಕಾರ್ಯಕ್ರಮದ ಭಿತ್ತಿಪತ್ರ, ಕರಪತ್ರ ಬಿಡುಗಡೆ ಮತ್ತು ವಿವಿಧ ಕಾಲೇಜು, ವಿಶ್ವವಿದ್ಯಾಲಯ ಹಾಗೂ ವಿವಿಧ ಇಲಾಖೆಯ



ಅಧಿಕಾರಿಗಳ ಸಭೆ ಜರುಗಿಸಿ ಮಾತನಾಡಿದರು.

ಸ್ವಾತಂತ್ರ್ಯ ದಿನಾಚರಣೆಯು ಕೇವಲ ಒಂದು ಸರ್ಕಾರಿ ಕಾರ್ಯಕ್ರಮವಲ್ಲ. ಇದು ದೇಶದ ಪ್ರತಿಯೊಬ್ಬ ಪ್ರಜೆಯ ಹೆಮ್ಮೆಯ ಪ್ರತೀಕ. ದೇಶದ ಸ್ವಾತಂತ್ರ್ಯಕ್ಕಾಗಿ ಪ್ರಾಣ ಬಿಟ್ಟ ಅಸಂಖ್ಯಾತ ಹೋರಾಟಗಾರರ ತ್ಯಾಗ, ಬಲಿದಾನವನ್ನು ಸ್ಮರಿಸುವ ಈ ಪವಿತ್ರ ದಿನವನ್ನು ಅತ್ಯಂತ ಗೌರವಯುತವಾಗಿ ಆಚರಿಸುವುದು ನಮ್ಮೆಲ್ಲರ ಕರ್ತವ್ಯ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಹೇಳಿದರು.

ಆಗಸ್ಟ್ 14ರ ಸಂಜೆ 6 ಗಂಟೆಯಿಂದ ಮಧ್ಯರಾತ್ರಿ 12 ಗಂಟೆಯವರೆಗೆ ಕರ್ನಾಟಕ ಕಾಲೇಜು ಮೈದಾನದಲ್ಲಿ ಸ್ವಾತಂತ್ರ್ಯೋತ್ಸವದ ಕುರಿತು ಶಾಲಾ-ಕಾಲೇಜು ವಿದ್ಯಾರ್ಥಿಗಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಅಧಿಕಾರಿಗಳು ಸಿದ್ಧತೆ ಮಾಡಿಕೊಳ್ಳಬೇಕು. 79ನೇ ಸ್ವಾತಂತ್ರ್ಯೋತ್ಸವದ ಸಾಂಸ್ಕೃತಿಕ ಯುವ ಸಂಭ್ರಮವು ಯುವಕ, ಯುವತಿಯರಲ್ಲಿ ರಾಷ್ಟ್ರ ಪ್ರೇಮವನ್ನು ಬೆಳೆಸುವಂತಹ ಕಾರ್ಯಕ್ರಮವಾಗಬೇಕು. ಈ ನಿಟ್ಟಿನಲ್ಲಿ ಸಾಂಸ್ಕೃತಿಕ ಯುವ ಸಂಭ್ರಮ ಕಾರ್ಯಕ್ರಮವನ್ನು ಅತ್ಯಂತ ಯಶಸ್ವಿಯಾಗಿ ಆಯೋಜಿಸಬೇಕಿದೆ ಎಂದು ಅವರು ತಿಳಿಸಿದರು.

ಸ್ವಾತಂತ್ರ್ಯ ಹೋರಾಟಗಾರರ ತ್ಯಾಗ, ಬಲಿದಾನಗಳನ್ನು ಸ್ಮರಿಸುವ, ಜ್ಞಾನವರ್ಧಕ ಕಾರ್ಯಕ್ರಮಗಳನ್ನೂ ಆಯೋಜಿಸಬೇಕು. ಜಿಲ್ಲೆಯ ಜಾನಪದ ಕಲೆಗಳು, ಸ್ಥಳೀಯ ಪ್ರತಿಭೆಗಳು ಮತ್ತು ಸಾಂಸ್ಕೃತಿಕ ವೈವಿಧ್ಯತೆಯನ್ನು ಬಿಂಬಿಸುವ ಕಾರ್ಯಕ್ರಮಗಳನ್ನು ರೂಪಿಸಬೇಕು. ಇದರಿಂದ ನಮ್ಮ ಸಂಸ್ಕೃತಿಯನ್ನು ಮುಂದಿನ ಪೀಳಿಗೆಗೆ ಪರಿಚಯಿಸಿದಂತಾಗುತ್ತದೆ ಎಂದು ತಿಳಿಸಿದರು.

ಪೊಲೀಸ್ ಇಲಾಖೆಯು ಕಾರ್ಯಕ್ರಮ ನಡೆಯುವ ಸ್ಥಳದಲ್ಲಿ ಮತ್ತು ನಗರದ ಪ್ರಮುಖ ಸ್ಥಳಗಳಲ್ಲಿ ಸೂಕ್ತ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಬೇಕು. ಸಾರ್ವಜನಿಕರ ಸುಗಮ ಸಂಚಾರಕ್ಕೆ ಸೂಕ್ತ ವ್ಯವಸ್ಥೆ ಮಾಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಸಮೂಹ ನೃತ್ಯ, ಜಾನಪದ ನೃತ್ಯ, ನೃತ್ಯ ರೂಪಕ, ಸಮೂಹ ದೇಶಭಕ್ತಿ ಗೀತೆ, ಸ್ವಾತಂತ್ರ್ಯ ಹೋರಾಟಗಾರರ ಕುರಿತ ರೂಪಕ ಮತ್ತು ಇತರೆ ಹಾಸ್ಯಮಯ ಪ್ರದರ್ಶನಗಳು ಈ ಸಾಂಸ್ಕೃತಿಕ ಯುವ ಸಂಭ್ರಮ ಕಾರ್ಯಕ್ರಮದಲ್ಲಿ ಇರಲಿವೆ ಎಂದು ಮಾಹಿತಿ ನೀಡಿದರು.

ಸಭೆಯಲ್ಲಿ ಕಾಲೇಜು ಶಿಕ್ಷಣ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಪೊಲೀಸ್ ಇಲಾಖೆ ಹಾಗೂ ಹುಬ್ಬಳ್ಳಿ-ಧಾರವಾಡ ಮಹಾನಗರದ ವಿವಿಧ ವಿಶ್ವವಿದ್ಯಾಲಯಗಳ, ಮಹಾವಿದ್ಯಾಲಯಗಳ ಮುಖ್ಯಸ್ಥರು, ಇಲಾಖೆಗಳ ಅಧಿಕಾರಿ, ಸಿಬ್ಬಂದಿಗಳು ಭಾಗವಹಿಸಿದ್ದರು.

### ಧ್ವಜಾರೋಹಣ

ಧಾರವಾಡ ಜಿಲ್ಲಾ ಕ್ರೀಡಾಂಗಣದಲ್ಲಿ ಆಗಸ್ಟ್ 15ರಂದು ಸ್ವಾತಂತ್ರ್ಯ ದಿನೋತ್ಸವದ ಕಾರ್ಯಕ್ರಮಗಳನ್ನು ಅರ್ಥಪೂರ್ಣವಾಗಿ ಮತ್ತು ಅದ್ಧೂರಿಯಾಗಿ ಆಯೋಜಿಸಬೇಕು. ಪೊಲೀಸ್, ಗೃಹರಕ್ಷಕ ದಳ, ಎನ್.ಸಿ.ಸಿ, ಸ್ಕೌಟ್ಸ್ ಮತ್ತು ಗೈಡ್ಸ್ ಹಾಗೂ ಶಾಲಾ ಮಕ್ಕಳಿಂದ ಆಕರ್ಷಕ ಪಥಸಂಚಲನ ಆಯೋಜಿಸಬೇಕು. ದೇಶಭಕ್ತಿ ಬಿಂಬಿಸುವ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಶಾಲಾ ಮಕ್ಕಳಿಂದ ಏರ್ಪಡಿಸಬೇಕೆಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

### ಹಳ್ಳಿಗುಡಿ ಸರ್ಕಾರಿ ಶಾಲೆಯಲ್ಲಿ ವಿವೇಕ ಕೊಠಡಿ, ಡಿಜಿಟಲ್ ಕ್ಲಾಸ್ ಉದ್ಘಾಟಿಸಿದ ಶಾಸಕ ಜಿ.ಎಸ್. ಪಾಟೀಲ

# ಶಾಲೆಗಳ ಗುಣಮಟ್ಟ, ಮೂಲಸೌಕರ್ಯ ಅಭಿವೃದ್ಧಿ



■ವಿಜಯಸಾಕ್ಷಿ ಸುದ್ದಿ, ಡಂಬಳ

ರಾಜ್ಯದಲ್ಲಿ ಸರ್ಕಾರಿ ಶಾಲೆಗಳನ್ನು ಖಾಸಗಿ ಶಾಲೆಗಳನ್ನೂ ಮೀರಿಸುವಂತೆ ಅಭಿವೃದ್ಧಿ ಮಾಡಲಾಗುತ್ತಿದೆ. ಸರ್ಕಾರಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣ ಜೊತೆಗೆ ಮೂಲಸೌಕರ್ಯಗಳು ಇನ್ನಷ್ಟು ಅಭಿವೃದ್ಧಿಗೊಳ್ಳಲಿವೆ ಎಂದು ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಡಂಬಳ ಹೋಬಳಿಯ ಹಳ್ಳಿಗುಡಿ ಗ್ರಾಮದ ಸರ್ಕಾರಿ ಕಿರಿಯ ಪ್ರಾಥಮಿಕ ಮತ್ತು ಹಿರಿಯ ಪ್ರಾಥಮಿಕ ಶಾಲೆಯ ವಿವೇಕ ಕೊಠಡಿ ಮತ್ತು ಡಿಜಿಟಲ್ ಕ್ಲಾಸ್ ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ಸರ್ಕಾರಿ ಶಾಲೆಗಳಿಗೆ ಬರುವ ಮಕ್ಕಳಿಗೆ ಕಲಿಕೆ ಉತ್ತಮವಾಗಿರಲು, ಡಿಜಿಟಲ್ ಶಿಕ್ಷಣಕ್ಕೆ ಪೂರಕವಾದ ಪರಿಕರಗಳನ್ನು ಒದಗಿಸಲಾಗುತ್ತಿದೆ. ಸರ್ಕಾರಿ ಶಾಲೆಯ ಮಕ್ಕಳಲ್ಲೂ ದೊಡ್ಡ ದೊಡ್ಡ ಕನಸುಗಳು ಇರುತ್ತವೆ. ಅವೆಲ್ಲವುಗಳನ್ನು ನನಸು ಮಾಡಿಕೊಳ್ಳುವಂತಹ ರಚನಾತ್ಮಕ ವಾತಾವರಣದ ನಿರ್ಮಾಣಕ್ಕೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರು ಆದ್ಯತೆ ನೀಡುತ್ತಿದ್ದಾರೆ ಎಂದು ಹೇಳಿದರು.

ಸಿ.ಆರ್.ಪಿ ಜಿ.ಕೆ. ವಸ್ತ್ರದ, ಮುಖ್ಯೋಪಾಧ್ಯಾಯ ಆರ್.ಎಸ್. ಕಲಗುಡಿ ಮಾತನಾಡಿ, ಇಂದಿನ ಆಧುನಿಕ ಕಾಲದಲ್ಲಿ ತಂತ್ರಜ್ಞಾನದ ಬಳಕೆ ಅತ್ಯಂತ ಪ್ರಮುಖವಾಗಿದೆ. ತಂತ್ರಜ್ಞಾನದ ಬಳಕೆಯಿಂದ ಕಲಿಕೆ ಮತ್ತು ಬೋಧನೆ ಪರಿಣಾಮಕಾರಿಯಾಗಿರುತ್ತದೆ. ಆ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳ ಜ್ಞಾನದ ವಿಕಾಸ ಹೆಚ್ಚಿಸಲು ಶಿಕ್ಷಣಕ್ಕೆ ಸರ್ಕಾರ ಆದ್ಯತೆ ನೀಡುತ್ತಿರುವುದು ಪ್ರಶಂಸನೀಯ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಎಸ್.ಡಿ.ಎಮ್.ಸಿ ಅಧ್ಯಕ್ಷ ಮಂಜುನಾಥ ಚನ್ನಳ್ಳಿ, ಬಸವರಾಜ ಪುರದ, ವೇ.ಮೂ. ಶಂಕ್ರಯ್ಯ ಹಿರೇಮಠ, ಅನ್ನಪೂರ್ಣ ಜಿ.ಪಾಟೀಲ, ಮುಂಡರಗಿ ತಾಲೂಕು ಕಾಂಗ್ರೆಸ್ ಅಧ್ಯಕ್ಷ ಡಿ.ಡಿ. ಮೋರನಾಳ, ಜಿ.ಎಸ್. ಕೊರ್ಲಹಳ್ಳಿ, ಉಮೇಶ ಚನ್ನಳ್ಳಿ, ಗುರಣ್ಣ ಕುರ್ತಕೋಟಿ, ಪಿಡಬ್ಲುಡಿ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಎಚ್.ಬಸವರಾಜ, ಸಹಾಯಕ ಇಂಜಿನಿಯರ್ ನಾಗೇಂದ್ರ ಪಟ್ಟಣಶೆಟ್ಟಿ, ಬಿಇಒ ಜಿ.ಎಸ್. ಅಣ್ಣಿಗೇರಿ, ಮುಖ್ಯೋಪಾಧ್ಯಾಯ ರಾಘವೇಂದ್ರ ಕಲಗುಡಿ, ಗುತ್ತಿಗೆದಾರರಾದ ಕಾರ್ತಿಕ ಪಾಟೀಲ್, ಮಂಜುನಾಥ ತಿಮ್ಮಾಪುರ, ಎಸ್.ಡಿ. ಮುದಗಲ್ಲ, ಎಸ್.ಆರ್. ನೀಲರಡ್ಡಿ, ರೇಖಾ ಬಾವಿಕಟ್ಟಿ, ಎಚ್.ಹಲವಾಗಲಿ, ಸರೋಜಾ, ಎಸ್‌ಡಿಎಮ್‌ಸಿ ಉಪಾಧ್ಯಕ್ಷರು, ಸದಸ್ಯರು, ಗ್ರಾಮದ ಹಿರಿಯರು, ಗ್ರಾ.ಪಂ ಸದಸ್ಯರು, ಶಿಕ್ಷಣ ಪ್ರೇಮಿಗಳು, ವಿದ್ಯಾರ್ಥಿಗಳು ಇದ್ದರು.

## ಅಂಜುಮನ್ ಸಂಸ್ಥೆಗೆ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಪಟ್ಟಣದ ಅಂಜುಮನ್ ಎ-ಇಸ್ಲಾಂ ಸಂಸ್ಥೆಯ ನೂತನ ಜನ ಪದಾಧಿಕಾರಿಗಳಿಗೆ ಆಯ್ಕೆ ಪ್ರಕ್ರಿಯೆ ನಡೆದಿದ್ದು, ಸಂಸ್ಥೆಯ ಮಾಜಿ ಅಧ್ಯಕ್ಷ ಸಿ.ಜಾಯಾದ್ ಅವರ ಬೆಂಬಲಿತರು ಆಯ್ಕೆಯಾಗಿದ್ದಾರೆ.

ಸಂಸ್ಥೆಯ ಉಪಾಧ್ಯಕ್ಷರಾಗಿ ವಗ್ಗಾಲಿ ಸಮಿವುಲ್ಲಾ, ಮಕ್ರಬ್ಬಿ ಜಬಿವುಲ್ಲಾ, ಕಾರ್ಯದರ್ಶಿಯಾಗಿ ಬಿ.ಮೆಹಬೂಬ್ ಸಾಬ್, ಸಹ ಕಾರ್ಯದರ್ಶಿಯಾಗಿ ಎಂ.ಕೆ. ಜಾವೀದ್, ಖಜಾಂಚಿಯಾಗಿ ಸಿರಾಜ್ ಆಯ್ಕೆಯಾಗಿದ್ದಾರೆ.

ಹಾಲಿ ಅಂಜುಮನ್ ಸಂಸ್ಥೆಯ ಅಧ್ಯಕ್ಷ ಎನ್.ಎಂ.ನೂರ್ ಅಹ್ಮದ್ ಅವರು ಪದಾಧಿಕಾರಿಗಳ ಆಯ್ಕೆಗೆ ಸಂಬಂಧಪಟ್ಟಂತೆ 18 ಜನ ಸದಸ್ಯರನ್ನು ತಮ್ಮ ಹಿಡಿತದಲ್ಲಿ ಇಟ್ಟುಕೊಂಡಿದ್ದರೂ ಸಹ ಯಾರೊಬ್ಬರೂ ಪದಾಧಿಕಾರಿಯಾಗಿ ಆಯ್ಕೆಯಾಗದ ಹಿನ್ನೆಲೆಯಲ್ಲಿ ಹಿನ್ನಡೆ ಅನುಭವಿಸಿದ್ದಾರೆ.

ಅಂಜುಮಾನ್ ಸಂಸ್ಥೆಗೆ ನೂತನ ಪದಾಧಿಕಾರಿಗಳಾಗಿ ಆಯ್ಕೆಯಾದ ಸದಸ್ಯರನ್ನು ಸಮಾಜದ ಮುಖಂಡರು ಸನ್ಮಾನಿಸಿ ಗೌರವಿಸಿದರು. ನೂತನ ಪದಾಧಿಕಾರಿಗಳ ಆಯ್ಕೆಗೆ ಸಂಸ್ಥೆಯ ಸದಸ್ಯರಾದ ಎಸ್. ಕೆ. ಸಮಿಹುಲ್ಲಾ, ಬಿ ರಿಯಾಜ್ ಅವರು ಶ್ರಮಿಸಿದರು. ಈ ವೇಳೆ ಪುರಸಭೆ ಅಧ್ಯಕ್ಷೆ ಫಾತೀಮಾಬೀ ಶೇಕ್ಷಾವಲಿ, ಸದಸ್ಯ ಜಾಕೀರ್ ಹುಸೇನ್, ಜಿ.ಜಾವೀದ್, ರಿಯಾಜ್, ಜೀಷಾನ್, ಶಬೀರ ಸೇರಿದಂತೆ ಮತ್ತಿತರರಿದ್ದರು.

## ಉಮರ್ ಫಾರೂಕ್ ಹುಬ್ಬಳ್ಳಿ ಜನ್ಮದಿನ ಆಚರಣೆ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಕಾಂಗ್ರೆಸ್ ಪಕ್ಷದ ಅಲ್ಪಸಂಖ್ಯಾತ ಘಟಕದ ಜಿಲ್ಲಾಧ್ಯಕ್ಷ ಉಮರ್ ಫಾರೂಕ್ ಹುಬ್ಬಳ್ಳಿಯವರ ಜನ್ಮದಿನವನ್ನು ಅವರ ಅಭಿಮಾನಿಗಳು ಮತ್ತು ಕಾಂಗ್ರೆಸ್ ಕಾರ್ಯಕರ್ತರು ಆಚರಿಸಿದರು.

ಈ ಸಂದರ್ಭದಲ್ಲಿ ಪಾಸ್ಟರ್ ಫ್ರಾನ್ಸಿಸ್ ಕನ್ನಯ್ಯ ಮಾತನಾಡಿ, ಜಿಲ್ಲೆಯ ಅಲ್ಪಸಂಖ್ಯಾತ ಸಮುದಾಯಗಳ ಕಲ್ಯಾಣದಲ್ಲಿ ಮಹತ್ವದ ಪಾತ್ರ ವಹಿಸುತ್ತಿರುವ ಜನಾಬ್ ಉಮರ್ ಫಾರೂಕ್ ಅವರ ಜನ್ಮದಿನದ ಈ ವಿಶೇಷ ಸಂದರ್ಭದಲ್ಲಿ ಕ್ರೈಸ್ತ ಸಮುದಾಯದ ಪರವಾಗಿ ಅವರ ಸೇವೆಯನ್ನು ಸ್ಮರಿಸುತ್ತೇನೆ ಎಂದರು.

ಈ ಸಂದರ್ಭದಲ್ಲಿ ಗದಗ-ಬೆಟಗೇರಿ ನಗರಾಭಿವೃದ್ಧಿ ಅಧ್ಯಕ್ಷರಾದ ಅಕ್ಬರಸಾಬ ಬಬರ್ಚಿ, ಅಶೋಕ ಮಂದಾಲಿ, ಮಹ್ಮದ ಶಾಲಗಾರ, ನದಾಫ್ ವಕೀಲರು, ಅನ್ವರ ಶಿರಹಟ್ಟಿ, ಶ್ರೀಧರ ಖಟವಟೆ, ರಾಜು, ಜಾವೀದ ಹುಬ್ಬಳ್ಳಿ, ಚಾಂದ ಕೊಟ್ಟೂರ, ಯಾಸೀನ ಹುಬ್ಬಳ್ಳಿ, ದಾದು ಕನವಳ್ಳಿ, ಸಲೀಮ ಬಳ್ಳಾರಿ, ಯೂಸೂಫ ಡಂಬಳ, ಅಹಮ್ಮದ ಖಾಜಿ, ಇರ್ಫಾನ ಡಂಬಳ, ಮುಸ್ತಾಫ ಹುಬ್ಬಳ್ಳಿ, ಕೈಫ ಬಳ್ಳಾರಿ, ಸರ್ಫರಾಜ ಬಬರ್ಚಿ, ಇಲಿಯಾಸ ಹುಬ್ಬಳ್ಳಿ, ಮಾಬುಲಿ ನಾಲಬಂದ, ಅಮೀನ ಧಾರವಾಡ, ಪಾಪು ಬಬರ್ಚಿ, ದಾವಲಸಾಬ ಧಾರವಾಡ, ಶಾಬಾಜ ಮುಲ್ಲಾ, ಲಾಲಸಾಬ ಕಿತ್ತೂರ ಸೇರಿದಂತೆ ಕಾಂಗ್ರೆಸ್ ಕಾರ್ಯಕರ್ತರು ಉಪಸ್ಥಿತರಿದ್ದರು.

## ಮತಗಳ್ಳತನ| ರಾಹುಲ್ ಗಾಂಧಿ ಬಳಿ ಸಾಕ್ಷಿ ಇದೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಲೋಕಸಭಾ ಚುನಾವಣೆಯ ಸಂದರ್ಭದಲ್ಲಿ ಬೆಂಗಳೂರಿನ ಮಹದೇವಪುರ ಮತ್ತು ರಾಜಾಜಿನಗರದಲ್ಲಿ

ಮತಗಳ್ಳತನ ಆಗಿರುವ ಬಗ್ಗೆ ರಾಹುಲ್ ಗಾಂಧಿಯವರ ಬಳಿ ಸಾಕ್ಷಿ ಇದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಗುರುವಾರ ಬೆಂಗಳೂರಿನ ದಿ ಹಿಲ್ಟನ್ ಹೋಟೆಲ್‌ನಲ್ಲಿ ಅವರು ಮಾಧ್ಯಮದವರೊಂದಿಗೆ ಮಾತನಾಡಿದರು.

ಆಗಸ್ಟ್ 4ರಂದು ರಾಹುಲ್ ಗಾಂಧಿ ಬೆಂಗಳೂರಿನಲ್ಲಿ ಪ್ರತಿಭಟನಾ ಪಾದಯಾತ್ರೆ ನಡೆಸಲಿದ್ದಾರೆ. ರಾಜ್ಯ ಮುಖ್ಯ



ಚುನಾವಣಾಧಿಕಾರಿಯನ್ನು ಭೇಟಿಯಾಗಲಿದ್ದಾರೆ ಎಂದು ಸಿಎಂ ತಿಳಿಸಿದರು.

ಚುನಾವಣಾ ಅಕ್ರಮ ನಡೆದಿದೆ ಎಂದು ಆರೋಪಿಸಲಾದ ಬೆಂಗಳೂರು ಕೇಂದ್ರ ಲೋಕಸಭಾ ಕ್ಷೇತ್ರದ ಮಹದೇವಪುರ ವಿಧಾನಸಭಾ ಕ್ಷೇತ್ರದಿಂದ ನಗರದಲ್ಲಿರುವ ರಾಜ್ಯ ಮುಖ್ಯ ಚುನಾವಣಾಧಿಕಾರಿ ಕಚೇರಿಯವರೆಗೆ ಆಗಸ್ಟ್ 4ರಂದು ರಾಹುಲ್ ಗಾಂಧಿ ನೇತೃತ್ವದಲ್ಲಿ ಪಾದಯಾತ್ರೆ ನಡೆಯಲಿದೆ.

ಜುಲೈ 24ರಂದು ಸಂಸತ್ತಿನ ಬಳಿ ಮಾಧ್ಯಮಗಳೊಂದಿಗೆ ಮಾತನಾಡಿದ ರಾಹುಲ್ ಗಾಂಧಿ ಕರ್ನಾಟಕದ ಒಂದು ಲೋಕಸಭಾ ಕ್ಷೇತ್ರದಲ್ಲಿ 'ಭಾರೀ ಮತ ಕಳ್ಳತನ' ನಡೆದಿದೆ ಎಂಬ ಗಂಭೀರ ಆರೋಪ ಮಾಡಿದ್ದರು. ಈ ಅಕ್ರಮದ ಹೆಚ್ಚಿನ ಮಾಹಿತಿಯನ್ನು ಶೀಘ್ರದಲ್ಲೇ ಚುನಾವಣಾ ಆಯೋಗ ಮತ್ತು ಸಾರ್ವಜನಿಕರ ಮುಂದೆ ಬಹಿರಂಗಪಡಿಸುವುದಾಗಿ ಹೇಳಿದ್ದರು.

### 2008ರ ಮಾಲೆಗಾಂವ್ ಸ್ಫೋಟ ಪ್ರಕರಣ:

## ಪ್ರಜ್ಞಾ ಠಾಕೂರ್ ಸೇರಿದಂತೆ ಎಲ್ಲಾ 7 ಆರೋಪಿಗಳ ಖುಲಾಸೆ

■ವಿಜಯಸಾಕ್ಷಿ ಸುದ್ದಿ, ಮುಂಬೈ

ಸುಮಾರು 17 ವರ್ಷಗಳ ಹಿಂದೆ ಆರು ಜನರ ಸಾವಿಗೆ ಕಾರಣವಾಗಿದ್ದ 2008ರ ಮಾಲೆಗಾಂವ್ ಸ್ಫೋಟ ಪ್ರಕರಣದಲ್ಲಿ, ಪ್ರಮುಖ ಆರೋಪಿಗಳಾಗಿದ್ದ ಮಾಜಿ ಬಿಜೆಪಿ ಸಂಸದೆ ಪ್ರಜ್ಞಾ ಸಿಂಗ್ ಠಾಕೂರ್ ಮತ್ತು ಲೆಫ್ಟಿನೆಂಟ್ ಕರ್ನಲ್ ಪ್ರಸಾದ್ ಪುರೋಹಿತ್ ಸೇರಿದಂತೆ ಎಲ್ಲಾ ಏಳು ಆರೋಪಿಗಳನ್ನು ವಿಶೇಷ ನ್ಯಾಯಾಲಯವು ಖುಲಾಸೆಗೊಳಿಸಿದೆ. ಗುರುವಾರ ತೀರ್ಪು ಪ್ರಕಟಿಸಿದ ವಿಶೇಷ ನ್ಯಾಯಾಲಯದ ನ್ಯಾಯಾಧೀಶರು, ಆರೋಪಿಗಳ ವಿರುದ್ಧ ಯಾವುದೇ "ವಿಶ್ವಾಸಾರ್ಹ ಮತ್ತು ಬಲವಾದ ಸಾಕ್ಷ್ಯ" ಇಲ್ಲ ಎಂದು ಸ್ಪಷ್ಟವಾಗಿ ಹೇಳಿದರು. ಈ ಪ್ರಕರಣದ ತನಿಖೆ ಮತ್ತು ವಿಚಾರಣೆಯು ಹಲವಾರು ಲೋಪದೋಷಗಳಿಂದ ಕೂಡಿದ್ದು, ಪ್ರಾಸಿಕ್ಯೂಷನ್ ತನ್ನ ಆರೋಪಗಳನ್ನು ಸಮಂಜಸವಾದ ಸಂದೇಹವನ್ನು ಮೀರಿ ಸಾಬೀತುಪಡಿಸಲು ವಿಫಲವಾಗಿದೆ ಎಂದು ನ್ಯಾಯಾಲಯ ಅಭಿಪ್ರಾಯಪಟ್ಟಿದೆ.

ನ್ಯಾಯಾಲಯವು ತನ್ನ ತೀರ್ಪಿನಲ್ಲಿ, "ಯಾವುದೇ ಧರ್ಮ ಹಿಂಸೆಯನ್ನು ಕಲಿಸುವುದಿಲ್ಲ" ಎಂದು ಹೇಳಿದ್ದು, "ಭಯೋತ್ಪಾದನೆಗೆ ಯಾವುದೇ ಧರ್ಮವಿಲ್ಲ" ಎಂದು ಒತ್ತಿಹೇಳಿದೆ.

## ಪ್ರಣವ್ ಮೊಹಾಂತಿ ವರ್ಗಾವಣೆ ತೀರ್ಮಾನವಾಗಿಲ್ಲ, ಧರ್ಮಸ್ಥಳ ಪ್ರಕರಣದಲ್ಲಿ ಸತ್ಯಾಂಶವೇ ಮುಖ್ಯ: ಗೃಹ ಸಚಿವ ಪರಮೇಶ್ವರ್

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಧರ್ಮಸ್ಥಳ ಪ್ರಕರಣದ ತನಿಖೆ ನಡೆಸುತ್ತಿರುವ ವಿಶೇಷ ತನಿಖಾ ದಳದ (SIT) ಮುಖ್ಯಸ್ಥ, ಡಿಜಿಪಿ ಪ್ರಣವ್ ಮೊಹಾಂತಿ ಅವರನ್ನು ಕೇಂದ್ರ ಸೇವೆಗೆ ಕಳುಹಿಸುವ ನಿರ್ಧಾರವನ್ನು ರಾಜ್ಯ ಸರ್ಕಾರ ತೆಗೆದುಕೊಂಡಿಲ್ಲ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಸ್ಪಷ್ಟಪಡಿಸಿದ್ದಾರೆ. ಕೇಂದ್ರ ಸರ್ಕಾರದ ನಿಯೋಜಿತ ಪಟ್ಟಿಯಲ್ಲಿ ಅವರ ಹೆಸರಿದ್ದರೂ, ಈ ಬಗ್ಗೆ ಯಾವುದೇ ಅಂತಿಮ ತೀರ್ಮಾನವಾಗಿಲ್ಲ ಎಂದು ಅವರು ತಿಳಿಸಿದ್ದಾರೆ.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಪರಮೇಶ್ವರ್,



ಡಿಜಿ ಹಂತದ ಅಧಿಕಾರಿಯನ್ನು ಎಸ್‌ಐಟಿ ಮುಖ್ಯಸ್ಥರನ್ನಾಗಿ ನೇಮಿಸಬೇಕೆಂದು ಸರ್ಕಾರ ತೀರ್ಮಾನಿಸಿತ್ತು. ಅದರಂತೆ ಪ್ರಣವ್ ಮೊಹಾಂತಿಯವರನ್ನು ನೇಮಿಸಲಾಯಿತು. ಆದರೆ, ಅವರನ್ನು ಕೇಂದ್ರ ಸೇವೆಗೆ ಕಳುಹಿಸುವ ಬಗ್ಗೆ ಯಾವುದೇ ತೀರ್ಮಾನ ಮಾಡಿಲ್ಲ. ಈ ವಿಚಾರದಲ್ಲಿ ಸೋಷಿಯಲ್ ಮೀಡಿಯಾಗಳಲ್ಲಿ ತಪ್ಪುಕಲ್ಪನೆಗಳನ್ನು ಹರಡಲಾಗುತ್ತಿದೆ, ಇದು ಸರಿಯಲ್ಲ ಎಂದು ಅವರು ಬೇಸರ ವ್ಯಕ್ತಪಡಿಸಿದರು.

ಧರ್ಮಸ್ಥಳ ಪ್ರಕರಣ: ರಾಜಕೀಯ ಹಸ್ತಕ್ಷೇಪ ಇಲ್ಲ ಧರ್ಮಸ್ಥಳ ಪ್ರಕರಣದಲ್ಲಿ ಸತ್ಯಾಂಶ ಹೊರಬರುವುದಷ್ಟೇ ಸರ್ಕಾರದ ಮುಖ್ಯ ಉದ್ದೇಶ. ಈ ನಿಟ್ಟಿನಲ್ಲಿಯೇ ಎಸ್‌ಐಟಿ ರಚಿಸಲಾಗಿದೆ.

# ಬಾಪೂಜಿ ಶಾಲೆಯಲ್ಲಿ ಯುವ ಸಂಸತ್ ರಚನೆ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿಯ ಲಕ್ಕುಂಡಿ ಗ್ರಾಮೀಣ ವಿದ್ಯಾವರ್ಧಕ ಸಂಸ್ಥೆಯ ಬಾಪೂಜಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ 2025-26ನೇ ಸಾಲಿನ ಶಾಲಾ ವಿದ್ಯಾರ್ಥಿ ಯುವ ಸಂಸತ್ ರಚನೆ ಮಾಡಲಾಯಿತು.

ಆಕಾಶ ಕುಂಟೋಜಿ ಪ್ರಧಾನ ಮಂತ್ರಿ, ವಂದನಾ ಭೋಸಲೆ ಉಪ ಪ್ರಧಾನಿ, ರಂಗನಗೌಡ ಪಾಟೀಲ ಶಿಕ್ಷಣ ಮಂತ್ರಿ, ಪ್ರತೀಕ್ಷಾ ಕಲ್ಲೂರ ಉಪ ಶಿಕ್ಷಣ ಮಂತ್ರಿ, ಶ್ರೀನಿಧಿ ಕಲಬಂಡಿ ಉನ್ನತ ಶಿಕ್ಷಣ, ಮಣಿಕಂಠ ಗರ್ಜಪ್ಪನವರ ಹಣಕಾಸು, ಮಧು ಪೂಜಾರ ಆರೋಗ್ಯ, ಅರ್ಫಾ ಯರಗುಡಿ ಆಹಾರ, ಮಹಮ್ಮದ ಅಬಜಾನ್ ಮಕಾನದಾರ



ಕ್ರೀಡೆ, ಸೂಫಿಯಾನ ನಮಾಜಿ ರಕ್ಷಣಾ, ಶ್ರೀದೇವಿ ಗರ್ಜಪ್ಪನವರ ನೀರಾವರಿ, ಗಗನ ಕಿಲ್ಲೆದ ವಾರ್ತಾ, ದಾವಲಸಾಬ ಈಟಿ ಸ್ವಚ್ಛತೆ, ಸಾನಿಯಾ ತಹಸೀಲ್ದಾರ ಕಾನೂನು, ಶ್ರೀದೇವಿ ಚಿತ್ತಾರಿ ಗ್ರಂಥಾಲಯ, ರೋಷನಜಮೀರ್ ಮಕಾನದಾರ ತೋಟಗಾರಿಕೆ, ವರ್ಷಾ ಬೇಲೇರಿ ಅಭಿವೃದ್ಧಿ, ಆದಿಲಸಾಬ ಓಲೇಕಾರ ಪ್ರಾರ್ಥನಾ, ಮಾಜ ತಹಸೀಲ್ದಾರ ವಿರೋಧಪಕ್ಷದ ನಾಯಕರಾಗಿ ಆಯ್ಕೆಯಾದರು.

1ನೇ ತರಗತಿಗೆ ಶ್ರೀನಿಧಿ ಮುನವಳ್ಳಿಮಠ, ಅನಿಷಾ ಶಲವಡಿ, 2ನೇ ತರಗತಿಗೆ ತರುಣ ನಿಡಗುಂದಿ, ಸುಮಂತ ಕುಂಬಾರ, 3ನೇ ತರಗತಿಗೆ ವಿಜಯ ನೋಟಗಾರ, ಶರತಗೌಡ ಗೌಡ್ರ, 4ನೇ ತರಗತಿಗೆ ಕೃತಿಕಾ ನೂಕಾಪೂರ, ಯಾಸೀರ ಯರಗುಡಿ, 5ನೇ ತರಗತಿಗೆ ಸಮರ್ಥ ಗರ್ಜಪ್ಪನವರ, ಚೈತ್ರಾ ಸೋಮನಕಟ್ಟಿ ಮತದಾನದ ಮೂಲಕ ತರಗತಿಗಳ ಪ್ರತಿನಿಧಿಯಾಗಿ ಆಯ್ಕೆಯಾದರು.

ಈ ಸಂದರ್ಭದಲ್ಲಿ ಶಾಲಾ ಪ್ರಧಾನ ಗುರುಗಳಾದ ಆರ್.ಬಿ. ಬರದ್ವಾಡ, ಹಿರಿಯ ಶಿಕ್ಷಕ ಬಸವರಾಜ ಗರ್ಜಪ್ಪನವರ, ಎಫ್.ಬಿ. ಬರದ್ವಾಡ, ಅರ್ಜುನ ಚಲವಾದಿ, ಎ.ಎಂ. ದಂಡಿನ, ಆಸ್ಮಾ ಕನವಳ್ಳಿ, ಲಕ್ಷ್ಮೀ ಗರ್ಜಪ್ಪನವರ ಇದ್ದರು. ಆಯ್ಕೆಯಾದ ಮಕ್ಕಳಿಗೆ ರಫೀಯಾ ದಂಡಿನ ಪ್ರಮಾಣವಚನ ಬೋಧಿಸಿದರು.

# ಪ್ರತಿಬಂಧಕಾಜ್ಞೆ ಜಾರಿ

▶▶ ಮೊದಲನೇ ಪುಟದಿಂದ

ಗುಂಪು ಕೂಡುವುದು ಅಥವಾ ವ್ಯಕ್ತಿಗಳ ಗುಂಪುಗಳ ಪ್ರವೇಶವನ್ನು ನಿರ್ಬಂಧಿಸಲಾಗಿದೆ. ಈ ಪ್ರದೇಶ ವ್ಯಾಪ್ತಿಯಲ್ಲಿ ಬರುವ ಝರಾಕ್ಸ್ ಅಂಗಡಿ, ಬುಕ್ ಸ್ಟಾಲ್ , ಫೋ-ಟೋ ಕಾಪಿಯರ್ ಗಳನ್ನು ಬಂದ ಮಾಡಲು ಆದೇಶಿಸಿದೆ. ಪರೀಕ್ಷಾ ಕೇಂದ್ರಗಳಲ್ಲಿ ಮೊಬೈಲ್ ಫೋನ್ ಮತ್ತು ಇತರ ಸಂಪರ್ಕ ಸಲಕರಣೆಗಳನ್ನು ತರುವುದನ್ನು ನಿಷೇಧಿಸಲಾಗಿದೆ. ಪರೀಕ್ಷಾ ದಿನಗಳಂದು ಪರೀಕ್ಷಾ ಕೇಂದ್ರಗಳಿಗೆ ವಿದ್ಯಾರ್ಥಿಗಳು ಆಗಮಿಸುವ ಸಮಯ ಮತ್ತು ಹೊರಹೋಗುವ ಸಮಯದಲ್ಲಿ ಮಾತ್ರ ಚಿತ್ರೀಕರಿಸಲು ಮಾಧ್ಯಮದವರಿಗೆ ಅವಕಾಶವಿದ್ದು, ಪರೀಕಾ ಗೌಪ್ಯತೆ ದೃಷ್ಟಿಯಿಂದ ಪರೀಕ್ಷಾ ಕೊಠಡಿಗಳಲ್ಲಿ ಪ್ರವೇಶ , ಚಿತ್ರೀಕರಣ ಇತ್ಯಾದಿಗಳನ್ನು ಸಂಪೂರ್ಣವಾಗಿ ನಿಷೇಧಿಸಿದೆ ಎಂದು ಜಿಲ್ಲಾಧಿಕಾರಿ ಮತ್ತು ಜಿಲ್ಲಾ ದಂಡಾಧಿಕಾರಿಗಳ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

# ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ-1 ರ ಅಲೆಮಾರಿ/ ಅರೆ ಅಲೆಮಾರಿ ಜನಾಂಗದ ವಿದ್ಯಾರ್ಥಿಗಳಿಂದ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ , ಅಲೆಮಾರಿ/ ಅರೆ ಅಲೆಮಾರಿ ಜನಾಂಗದ ಮೆಟ್ರಿಕ್ ನಂತರದ ಅರ್ಹತಾ ವಿದ್ಯಾರ್ಥಿ ವೇತನ ಶುಲ್ಕ, ವಿನಾಯತಿ, ವಿದ್ಯಾಸಿರಿ ಊಟ ಮತ್ತು ವಸತಿ ಸಹಾಯ ಯೋಜನೆ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಕೊನೆಯ ದಿನ ಸೆಪ್ಟೆಂಬರ್ 30 ಆಗಿದ್ದು, ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕಾದ ವೆಬ್‌ಸೈಟ್ ವಿಳಾಸ https://ssp.postmatric.karnataka.gov.in ಆಗಿದೆ.

ಕಾರ್ಯಕ್ರಮಗಳ ವಿವರ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿ ವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಮಾಹಿತಿಗಾಗಿ ವೆಬ್ ಸೈಟ್ https://bcwd.karnataka.gov.in ವೀಕ್ಷಿಸಬಹುದಾಗಿದೆ.

### 'ರತ್ನ ಮಾಂಗಲ್ಯ' ನಾಟಕ ಪ್ರದರ್ಶನ ಉದ್ಘಾಟಿಸಿದ ಯುವ ಧುರೀಣ ಮಿಥುನ್ ಪಾಟೀಲ

# ನಾಟಕ ಕಲೆಯನ್ನು ಉಳಿಸಿ-ಬೆಳೆಸಿ



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನಾಟಕ ನಮ್ಮ ಜೀವನವನ್ನು ಪ್ರತಿಬಿಂಬವಾಗಿಸಿ ನಮಗೆ ತೋರಿಸುತ್ತದೆ. ನಮ್ಮ ಪಾತ್ರವನ್ನೇ ಕಲಾವಿದರು ಅಭಿನಯಿಸಿ ತೋರಿಸುತ್ತಾರೆ. ನಾಟಕಗಳು ಜೀವನದ ಮೌಲ್ಯಗಳನ್ನು ಸಾರುತ್ತವೆ. ಆದ್ದರಿಂದ ನಾಟಕ ಕಲೆಯನ್ನು ಉಳಿಸಿ-ಬೆಳೆಸುವ ಕೆಲಸವಾಗಬೇಕಿದೆ ಎಂದು ರೋಣ ಪುರಸಭೆಯ ಸದಸ್ಯ, ಯುವ ಧುರೀಣ ಮಿಥುನ್ ಜಿ. ಪಾಟೀಲ ಹೇಳಿದರು.

ಪಟ್ಟಣದ ಅಬ್ಬಿಗೇರಿ ರಸ್ತೆಯಲ್ಲಿ ನವಲಗುಂದದ ಶ್ರೀ ಗುರು ಕುಮಾರೇಶ್ವರ ನಾಟ್ಯ ಸಂಘದವರು ಪ್ರಾರಂಭಿಸಿರುವ ನಾಟಕ 'ರತ್ನ ಮಾಂಗಲ್ಯ'ವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸದಭಿರುಚಿಯ ನಾಟಕಗಳನ್ನು ನೋಡುವುದಿದ್ದರೆ ಅದು ಉತ್ತರ ಕರ್ನಾಟಕದಲ್ಲಿ ಮಾತ್ರ. ಹಿಂದೆ ಅದೆಂತಹ ಕಂನಿಗಳಿದ್ದವು ಎಂಬುದನ್ನು ನೆನೆಸಿಕೊಂಡರೆ ಮೈ ರೋಮಾಂಚನವಾಗುತ್ತದೆ. ಸುಳ್ಳದ ಕಂಪನಿ, ಗುಡಗೇರಿ ಕಂಪನಿ, ಸೂಡಿ ಕಂಪನಿ ಇತ್ಯಾದಿಗಳು ಸಿನಿಮಾಗಳನ್ನೂ ಮೀರಿಸುವಂತೆ ನಾಟಕ ಪ್ರದರ್ಶನ ಮಾಡಿದ್ದನ್ನು ನೋಡಿದ್ದೇವೆ. ಅಂದಿನ ದಿನಗಳು ನಾಟಕ ಕಂಪನಿಗಳಿಗೆ ಸುವರ್ಣ ಯುಗಗಳಾಗಿದ್ದವು. ಆದರೆ ಇಂದು ನಾಟಕಗಳ ಸ್ಥಿತಿ ಅಧೋಗತಿಗಿಳಿದಿದೆ. ಇದಕ್ಕೆ ಪ್ರೇಕ್ಷಕರ ಅಭಿರುಚಿ ಬೇರೆಯಾಗಿರುವುದೇ ಕಾರಣವಾಗಿದೆ ಎಂದು ಹೇಳಿ ಕಂಪನಿಗೆ ಧನ ಸಹಾಯ ನೀಡಿದರು.

> ಸಂಘದ ಮಾಲೀಕ ಪ್ರವೀಣ ಬಾಗಲಕೋಟೆ ಮಾತನಾಡಿ, ನಮ್ಮನ್ನು ಕಾಪಾಡುತ್ತೀರಿ ಎಂಬ ಭರವಸೆಯೊಂದಿಗೆ ನಿಮ್ಮೂರಿಗೆ ಬಂದಿದ್ದೇವೆ.
> ಪಟ್ಟಣದ ಮತ್ತು ಸುತ್ತಲಿನ ಗ್ರಾಮಗಳ ಕಲಾಪೋಷಕರು ನಮ್ಮನ್ನು ಆಶೀರ್ವದಿಸಬೇಕೆಂದರು.

ಪಟ್ಟಣ ಪಂಚಾಯತಿ ಉಪಾಧ್ಯಕ್ಷ ಕುಮಾರಸ್ವಾಮಿ ಕೋರಧಾನ್ಯಮಠ ಮಾತನಾಡಿ, ನಮ್ಮೂರಿಗೆ ಬಂದಿರುವ ಈ ನಾಟಕ ಕಂಪನಿಯನ್ನು ಸಲಹುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ. ಇಲ್ಲಿನ ಕಲಾವಿದರೆಲ್ಲ ಹೊಟ್ಟೆ ತುಂಬಾ ಉಂಡು, ನಲಿದು ಹೋಗುವಂತೆ ಮಾಡುವ ಹೊಣೆಗಾರಿಕೆ ನಮ್ಮೆಲ್ಲರ ಮೇಲಿದ್ದು, ಅತ್ಯಂತ ಸುಂದರವಾಗಿ ನಾಟಕವಾಡುವ ಈ ಕಲಾವಿದರನ್ನು ನಾವೆಲ್ಲರೂ ನಾಟಕ ನೋಡುವ ಮೂಲಕ ಪ್ರೋತ್ಸಾಹಿಸೋಣ ಎಂದರು.

ನಿವೃತ್ತ ಶಿಕ್ಷಕ ಎಂ.ಎಸ್. ದಢೇಸೂರಮಠ ಮಾತನಾಡಿ, ನರೇಗಲ್ಲ ಪಟ್ಟಣವು ಎಂದಿನಿಂದಲೂ ಕಲೆಗಳ ತವರೂರಾಗಿದೆ. ಇಲ್ಲಿ ಕಲಾಕಾರರಿಗೆ ಎಂದಿಗೂ ಬೆಲೆ ಇದ್ದೇ ಇದೆ. ಆದ್ದರಿಂದ ಈ ನಾಟಕ ಕಂಪನಿ ಖಂಡಿತವಾಗಿಯೂ ಯಶಸ್ವಿಯಾಗುತ್ತದೆ ಎಂದರು.

ಸಮಾರಂಭದ ದಿವ್ಯ ಸಾನ್ನಿಧ್ಯವನ್ನು ಅಬ್ಬಿಗೇರಿಯ ಯಲ್ಲಾ ಲಿಂಗೇಶ್ವರ ಮಠದ ಶ್ರೀ ಬಸವರಾಜ ದೇವರು ವಹಿಸಿದ್ದರು. ಪಟ್ಟಣ ಪಂಚಾಯಿತಿ ಅಧ್ಯಕ್ಷ ಫಕೀರಪ್ಪ ಮಳ್ಳಿ ಅಧ್ಯಕ್ಷತೆ ವಹಿಸಿದ್ದರು. ವೇದಿಕೆಯ ಮೇಲೆ ಮಲ್ಲನಗೌಡ ಪಾಟೀಲ, ಬಸವರಾಜ ವಂಕಲಕುಂಟಿ, ಶಿವನಗೌಡ ಪಾಟೀಲ, ಸದಸ್ಯ ಕಳಕನಗೌಡ ಪೊಲೀಸ್‌ಪಾಟೀಲ ಉಪಸ್ಥಿತರಿದ್ದರು. ಶಿಕ್ಷಕ ವಿ.ವಿ. ಅಣ್ಣಿಗೇರಿ ನಿರ್ವಹಿಸಿದರು.

# ಕಾಡು ಹಂದಿ ಉಪಟಳ: ಅಪಾರ ಬೆಳೆ ಹಾನಿ



■ ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ತಾಲೂಕಿನ ಜಾಜಿಕಲ್ ಗುಡ್ಡದ ಅರಣ್ಯ ಪ್ರದೇಶಕ್ಕೆ ಹೊಂದಿಕೊಂಡಿರುವ ಬಾವಿಹಳ್ಳಿ, ಕೊಂಗನಹೊಸೂರು, ಕಣಿವಿಹಳ್ಳಿ ಗ್ರಾಮದ ರೈತರುಗಳ ಜಮೀನುಗಳಿಗೆ ಕಾಡು ಹಂದಿಗಳು ನುಗ್ಗಿ ಶೇಂಗಾ ಮತ್ತು ಮೆಕ್ಕೆಜೋಳ ಸೇರಿ ಇತರೆ ಬೆಳೆಗಳನ್ನು ಕಳೆದ ಹಲವು ದಿನಗಳಿಂದ ನಾಶಪಡಿಸುತ್ತಿದ್ದು, ರೈತರು ಕಂಗಾಲಾಗಿದ್ದಾರೆ.

ಬಾವಿಹಳ್ಳಿ ಗ್ರಾಮದ ಪೂಜಾರ್ ಬಸಪ್ಪ ಹಗೂ ನೆಲ್ಕುದ್ರಿ ಬಸವರಾಜ್ ಎನ್ನುವ ರೈತರ ಜಮೀನುಗಳಿಗೆ ಗುರುವಾರ ನಸುಕಿನ ಜಾವ ಕಾಡು ಹಂದಿಗಳು ನುಗ್ಗಿ ಅಪಾರ ಪ್ರಮಾಣದ ಮೆಕ್ಕೆ ಜೋಳವನ್ನು ಹಾನಿಗೊಳಿಸಿವೆ. ಇದರ ಬಗ್ಗೆ ಕ್ರಮ ವಹಿಸಲು ರೈತರು ಅರಣ್ಯ ಇಲಾಖೆ ಅಧಿಕಾರಿಗಳಿಗೆ ದೂರವಾಣಿ ಕರೆ ಮಾಡಿದರೆ ಸರಿಯಾಗಿ ಸ್ಪಂದಿಸದೆ ನಿರ್ಲ್ಯಕ್ಷ ವಹಿಸುತ್ತಿದ್ದಾರೆ ಎಂದು ರೈತರು ಆಕ್ರೋಶ ವ್ಯಕ್ತಪಡಿಸಿದರು.

ಕಳೆದ ವರ್ಷ ಸುತ್ತಮುತ್ತಲಿನ ನೂರಾರು ರೈತರ ಜಮೀನುಗಳಿಗೆ ಕಾಡು ಹಂದಿ ನುಗ್ಗಿ ಬೆಳೆ ನಾಶವಾದ ಬಗ್ಗೆ ಪರಿಹಾರಕ್ಕೆ ಅರ್ಜಿ ಸಲ್ಲಿಸಿದ್ದರು. ಆದರೆ ಇಲಾಖೆಯಲ್ಲಿ ಹಣ ಮಂಜೂರಾಗದ ಕಾರಣ ಬೆರಳೆಣಿಕೆಯಷ್ಟು ರೈತರಿಗೆ ಮಾತ್ರ ಪರಿಹಾರ ಸಿಕ್ಕಿತ್ತು. ಕಾಡಿನಿಂದ ಪ್ರಾಣಿಗಳು ಹೊರಬರದಂತೆ ಸೂಕ್ತ ಕ್ರಮ ವಹಿಸಲು ರೈತರು ವಿನಂತಿಸಿದರೂ ಕೂಡ ಅಧಿಕಾರಿಗಳು ರೈತರ ಮಾತನ್ನು ಆಲಿಸುತ್ತಿಲ್ಲ ಎಂದು ರೈತರು ಅರಣ್ಯ ಇಲಾಖೆ ಅಧಿಕಾರಿಗಳ ಬಗ್ಗೆ ಬೇಸರ ವ್ಯಕ್ತಪಡಿಸಿದರು.

ಹಂದಿಗಳು ಬೆಳೆ ನಾಶಪಡಿಸಿದ ಜಮೀನುಗಳಿಗೆ ಭೇಟಿ ನೀಡಿದ್ದೇವೆ. ಎಷ್ಟು ಬೆಳೆ ಹಾನಿಯಾಗಿದೆಯೋ ಅದಕ್ಕೆ ಪರಿಹಾರ ಒದಗಿಸಲು ಅರ್ಜಿಗಳನ್ನು ಸ್ವೀಕರಿಸುತ್ತೇವೆ.

ಆದರೆ ಪರಿಹಾರದ ಹಣ ಯಾವಾಗ ಬರುತ್ತದೆ ಎಂಬುದು ನಮಗೂ ಗೊತ್ತಿಲ್ಲ ಎಂದು ಚಿಗ-ಟೇರಿ ವಲಯ ಅರಣ್ಯಾಧಿಕಾರಿ ರಾಘವೇಂದ್ರ ತಿಳಿಸಿದರು.

# ಒಂದೆರಡು ತಿಂಗಳ ಒಳಗಾಗಿ ಸೂಕ್ತ ಆದೇಶ

▶▶ ಮೊದಲನೇ ಪುಟದಿಂದ

ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯ ಅಭಿವೃದ್ಧಿ ಸಚಿವ ಡಾ. ಶರಣಪ್ರಕಾಶ ಪಾಟೀಲ ಒಪ್ಪಿಗೆ ಸೂಚಿಸಿದ್ದಾರೆ ಎಂದು ವಿ.ಪ ಸದಸ್ಯ ಎಸ್.ವಿ. ಸಂಕನೂರ ಹಾಗೂ ಐಟಿಐ ಸಂಘದ ರಾಜ್ಯಾಧ್ಯಕ್ಷ ಎಸ್.ಆರ್. ರವಿ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಬೆಂಗಳೂರಿನ ವಿಕಾಸ ಸೌಧದ ಕೊಠಡಿಯಲ್ಲಿ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯ ಅಭಿವೃದ್ಧಿ ಸಚಿವ ಡಾ. ಶರಣಪ್ರಕಾಶ್ ಪಾಟೀಲರ ಅಧ್ಯಕ್ಷತೆಯಲ್ಲಿ ಶಿಕ್ಷಕರ ಹಾಗೂ ಪದವೀಧರ ಮತಕ್ಷೇತ್ರದಿಂದ ಆಯ್ಕೆಯಾದ ವಿಧಾನ ಪರಿಷತ್ ಸದಸ್ಯರು, ಕರ್ನಾಟಕ ರಾಜ್ಯ ಅನುದಾನಿತ ಖಾಸಗಿ ಐಟಿಐ ನೌಕರರ ಸಂಘದ ಪದಾಧಿಕಾರಿಗಳ ಹಾಗೂ ಸಂಬಂಧಪಟ್ಟ ಇಲಾಖೆ ಮುಖ್ಯಸ್ಥರ ಜೊತೆ ಸುದೀರ್ಘವಾಗಿ ಸಭೆ ನಡೆಸಿ ಹಲವಾರು ಮಹತ್ವದ ನಿರ್ಣಯಗಳನ್ನು ಕೈಗೊಳ್ಳಲಾಯಿತು.

ಸಭೆಯಲ್ಲಿ ವಿ.ಪ ಸದಸ್ಯರಾದ ಪುಟ್ಟಣ್ಣ, ಶಶೀಲ ನಮೋಶಿ, ಹನುಮಂತ ನಿರಾಣಿ, ಶಾಸಕ ಶ್ರೀವತ್ಸ, ಪದಾಧಿಕಾರಿ ಕೆ.ಎನ್. ಶಶಿಧರ್ ಮುಂತಾದವರು ಹಾಜರಿದ್ದರು ಎಂದು ವಿ.ಪ ಸದಸ್ಯ ಎಸ್.ವಿ. ಸಂಕನೂರ ಹಾಗೂ ಐಟಿಐ ಸಂಘದ ರಾಜ್ಯಾಧ್ಯಕ್ಷ ಎಸ್.ಆರ್. ರವಿ ತಿಳಿಸಿದ್ದಾರೆ.

# ಕಾಂಗ್ರೆಸ್‌ನ ಹಗ್ಗ ಜಗ್ಗಾಟದ ಪರಿಣಾಮ ರೈತರ ಮೇಲೆ

▶▶ ಮೊದಲನೇ ಪುಟದಿಂದ

ಪಕ್ಕೀರಪ್ಪ ಗೋಡಿ, ಕೆ.ಪಿ. ಕೋಟಿಗೌಡ್ರ, ರಾಚಯ್ಯ ಹೊಸಮಠ, ಗುರುಶಾಂತಗೌಡ ಮರಿಗೌಡ್ರ, ಅಮರನಾಥ ಗಡಗಿ, ರಮೇಶ ಸಜ್ಜಗಾರ, ಅಶೋಕ ಕರೂರ, ಅರವಿಂದ ಕೇಲೂರ, ಶಂಕರ ಕಾಕಿ, ನವೀನ ಕೊಟೆಕಲ್, ರಾಹುಲ್ ಸಂಕಣ್ಣವರ, ಕುಮಾರ ಮಾರನಬಸರಿ, ಶೇಖಣ್ಣ ಕನ್ಯಾಳ, ಸಂಜೀವ ಖಟವಟೆ, ದೇವೆಂದ್ರಪ್ಪ ಹೂಗಾರ, ಪಂಚಾಕ್ಷರಿ ಅಂಗಡಿ, ಅರವಿಂದ ಅಣ್ಣಿಗೇರಿ, ಸುರೇಶ ಹೆಬಸೂರ, ಬಸವರಾಜ ಮಡಿವಾಳರ, ಗಂಗಾಧರ ಮೇಲಗಿರಿ, ಶಂಕರ ಮಲ್ಲಸಮುದ್ರಾ, ಬಸವರಾಜ ಹಲಾಪೂರ, ಭಾಗಪ್ಪ ವಗ್ಗರ, ಈರಣ್ಣ ಗಡಗಿ, ಮಂಜುನಾಥ ಹಳ್ಳೂರಮಠ, ಈರಣ್ಣ ಅಂಗಡಿ, ಮಹಾದೇವಪ್ಪ ಚಿಂಚಲಿ, ನಿಂಗಪ್ಪ ಬೂಶಿಯವರ, ಪ್ರೀತಿ ಶಿವಪ್ಪಯ್ಯನಮಠ, ಕಮಲಾಕ್ಷೀ ಗೊಂದಿ, ಯೋಗೇಶ್ವರಿ ಭಾವಿಕಟ್ಟಿ, ಸ್ವಾತಿ ಅಕ್ಕಿ, ಸುಮಂಗಲಾ ಕೊನೆವಾಲ, ಕಮಲಾಕ್ಷೀ ತೆಕ್ಕಲಕೋಟಿ, ಸಾವಿತ್ರಿ ಪಾಟೀಲ, ಸೋಮಣ್ಣ ಪುರದ, ಪ್ರಭು ಕಲ್ಬಂಡಿ, ಮಲ್ಲಪ್ಪ ಕರಿಬಿಷ್ಠಿ, ವೀರಣ್ಣ ಗಡಗಿ, ಸೋಮಣ್ಣ ನಡೂರ, ಜಡಿಯಪ್ಪ ಲದ್ದಿ, ಮಾಂತೇಶ ಕಾತರಕಿ, ಮಂಜುನಾಥ, ವಿನೋದ ಹಂಸನೂರ ಸೇರಿದಂತೆ ರೈತರು, ಪ್ರಮುಖರು ಉಪಸ್ಥಿತರಿದ್ದರು.

# ಇಬ್ಬರ ಮೇಲೆ ಚಿರತೆ ದಾಳಿ: ಓರ್ವನ ಬೆರಳು ಕಟ್!

■ ವಿಜಯಸಾಕ್ಷಿ ಸುದ್ದಿ, ಚಿಕ್ಕಮಗಳೂರು

ರಸ್ತೆಯಲ್ಲಿ ಹೋಗುತ್ತಿದ್ದ ಇಬ್ಬರ ಮೇಲೆ ಚಿರತೆ ದಾಳಿ ಮಾಡಿರುವ ಘಟನೆ ಜಿಲ್ಲೆಯ ಕಡೂರು ತಾಲೂಕಿನ ಸಖರಾಯಪಟ್ಟಣ ಸಮೀಪದ ಮದಗದ ಕೆರೆ ಬಳಿ ಜರುಗಿದೆ.

ಚಿರತೆ ದಾಳಿಗೆ ಒಳಗಾದವರನ್ನು ಮೂರ್ತಣ್ಣ, ಮಂಜಣ್ಣ ಎಂದು ಗುರುತಿಸಲಾಗಿದೆ.

ಹಳ್ಳಿಯಿಂದ ಸಖರಾಯಪಟ್ಟಣಕ್ಕೆ ಬರುವಾಗ ಮಾರ್ಗ ಮಧ್ಯೆ ಈ ಘಟನೆ ಜರುಗಿದೆ.

ಮೂರ್ತಣ್ಣ ಎಂಬುವರ ಎಡಗೈನ ಒಂದು ಬೆರಳನ್ನು ಚಿರತೆ ತಿಂದಿದೆ ಎಂದು ತಿಳಿದು ಬಂದಿದೆ.

ಹಳ್ಳಿಯಲ್ಲಿ ಜನಸಾಮಾನ್ಯರ ಮೇಲೆ ಚಿರತೆ ದಾಳಿಗೆ ಮುಂದಾಗ್ತಿದ್ದು, ಎಮ್ಮೆದೊಡ್ಡಿಯಲ್ಲಿ ಮನೆಯಿಂದ ಹೊರಬರೋದಕ್ಕೂ ಜನ ಭಯ ಪಡುವಂತಾಗಿದೆ.

### ರಾಷ್ಟ್ರಮಟ್ಟದ ಸೌಂದರ್ಯ ಸ್ಪರ್ಧೆಯಲ್ಲಿ ಮುಂಡರಗಿ ಸುಂದರಿಯರು ರನ್ನರ್ ಅಪ್

# ಶೀಘ್ರದಲ್ಲಿ 'ಗದಗ ಫ್ಯಾಷನ್ ವೀಕ್'

■ ವಿಜಯಸಾಕ್ಷಿ ಸುದ್ದಿ, ಗದಗ

ಜುಲೈ 27ರಂದು ತುಮಕೂರಿನಲ್ಲಿ ನಡೆದ ರಾಷ್ಟ್ರಮಟ್ಟದ ಗ್ಲಾಮ್‌ಸ್ಟಾರ್ ಇಂಡಿಯಾ-2025 ಸೀಸನ್-2 ಸೌಂದರ್ಯ ಸ್ಪರ್ಧೆಯಲ್ಲಿ ಗದಗ ಜಿಲ್ಲೆಯ ಮುಂಡರಗಿ ತಾಲೂಕಿನ ಸುಂದರಿಯರು ಸ್ಪರ್ಧಿಸಿ ರನ್ನರ್ ಅಪ್ ಕಿರೀಟವನ್ನು ಮುಡಿಗೇರಿಸಿಕೊಂಡಿದ್ದು, ಟ್ಯಾಲೆಂಟೆಡ್ ಅವಾರ್ಡ್‌ನ್ನು ಪಡೆಯುವಲ್ಲಿ ಯಶಸ್ವಿಯಾಗಿದ್ದಾರೆ. 13 ವರ್ಷದೊಳಗಿನ ಸ್ಪರ್ಧೆ ಹಾಗೂ 13ರಿಂದ 19 ವರ್ಷದೊಳಗಿನವರ ಟೀನ್ ಕ್ಯಾಟಗರಿಯಲ್ಲಿ ಪ್ರಶಸ್ತಿ ಪಡೆದುಕೊಂಡಿದ್ದಾರೆ ಎಂದು ಎಂಡಿ ಮಾಡಲ್ಸ್ ಮ್ಯಾನೇಜ್ಮೆಂಟ್ ಸಂಸ್ಥಾಪಕ ಯೋಗೇಶ್ ಹೊಸಮಠ ಹೇಳಿದರು.





ಬುಧವಾರ ಇಲ್ಲಿನ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯನ್ನು ನಡೆಸಿ ಮಾತನಾಡಿದ ಅವರು, ನಂದಾ ಮತ್ತು ದೀಪಾ ಇಬ್ಬರು 13 ವಯಸ್ಸಿನ ರನ್ನರ್ ಅಪ್ ಆಗಿದ್ದಾರೆ. ಟ್ಯಾಲೆಂಟೆಡ್ ರೌಂಡ್‌ನ ರನ್ನರ್ ಅಪ್ ಪ್ರಶಸ್ತಿಯನ್ನು ದೀಪಾ ಪಡೆದುಕೊಂಡಿದ್ದಾರೆ. ಈ ಸ್ಪರ್ಧೆಯು ಸೌಂದರ್ಯದ ಜೊತೆಗೆ ಬುದ್ಧಿಶಕ್ತಿಯನ್ನು ಪರೀಕ್ಷಿಸುವ ಸ್ಪರ್ಧೆಯಾಗಿತ್ತು. ಈ ಪ್ರಶಸ್ತಿಯನ್ನು ನಮ್ಮ ಜಿಲ್ಲೆಯವರು ಪಡೆದದ್ದು ಸಂತಸ ತಂದಿದೆ. ಜೊತೆಗೆ 19 ವರ್ಷ ಮೇಲ್ಪಟ್ಟ ಮಿಸ್ ಕೆಟಗರಿಯಲ್ಲಿ ದಾವಣಗೆರೆಯಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಮೂಲತಃ ಮುಂಡರಗಿಯವರಾದ ಸೋನಿಯಾ ಶೇಠ್ ರನ್ನರ್ ಅಪ್ ಪ್ರಶಸ್ತಿಗೆ ಭಾಜನರಾಗಿದ್ದಾರೆ ಎಂದು ತಿಳಿಸಿದರು.

> ಸಾನಿಯಾ ಶೇಠ್ ಮಾತನಾಡಿ, ಸ್ಪರ್ಧೆಯಲ್ಲಿ ಭಾಗವಹಿಸಿ ರನ್ನರ್ ಅಪ್ ಪಡೆದುಕೊಂಡಿದ್ದು ಸಂತಸ ತಂದಿದೆ. ನಾವು ಭಾಗವಹಿಸಿದ ಸ್ಪರ್ಧೆಯಲ್ಲಿ ಬೆಂಗಳೂರು, ಮಂಗಳೂರು, ಬೆಳಗಾವಿ ಸೇರಿದಂತೆ ಸ್ಯಾಂಡಲ್‌ವುಡ್ ನಟಿಯರು ಭಾಗವಹಿಸಿದ್ದರು. ಇವರೆಲ್ಲರ ನಡುವೆ ಸ್ಪರ್ಧಿಸಿ ರನ್ನರ್ ಅಪ್ ಪಡೆದದ್ದು ಹೆಮ್ಮೆ ಮೂಡಿಸಿದೆ. ಖ್ಯಾತ ನಾಯಕ ನಟ ಶರಣ್ ಅವರಿಂದ ಪ್ರಶಸ್ತಿ ಸ್ವೀಕರಿಸಿದ್ದು ನಮ್ಮ ಸಂತಸವನ್ನು ಇಮ್ಮಡಿಗೊಳಿಸಿದೆ ಎಂದು ತಮ್ಮ ಅನುಭವ ಹಂಚಿಕೊಂಡರು.

ಗದಗ ಜಿಲ್ಲೆಯ ಸಂಸ್ಕೃತಿಯನ್ನು ಪ್ರದರ್ಶಿಸುವ ಉದ್ದೇಶದಿಂದ ಅತೀ ಶೀಘ್ರದಲ್ಲಿ 'ಗದಗ ಫ್ಯಾಷನ್ ವೀಕ್' ಪ್ರಾರಂಭಿಸಲಾಗುವುದು. ಬೆಟಗೇರಿಯ ಸೀರೆಗಳಿಗೆ ದೇಶಾದ್ಯಂತ ಹೆಚ್ಚು ಬೇಡಿಕೆ ಇದೆ. ಅದೇ ರೀತಿ ಕಲೆ, ಸಾಹಿತ್ಯದಲ್ಲೂ ಗದಗ ಜಿಲ್ಲೆ ಮುಂಚೂಣಿಯಲ್ಲಿದ್ದು, ಆ ಎಲ್ಲಾ ಪ್ರತಿಭೆಗಳನ್ನು ಅನಾವರಣಗೊಳಿಸುವುದೇ ಇದರ ಮೂಲ ಉದ್ದೇಶವಾಗಿದೆ ಎಂದರು.

ಈ ವೇಳೆ ನಂದಾ ಹಾಗೂ ದೀಪಾ ಉಪಸ್ಥಿತರಿದ್ದರು.

# ಇಂದು ವ್ಯಸನ ಮುಕ್ತ ದಿನಾಚರಣೆ

▶▶ ಮೊದಲನೇ ಪುಟದಿಂದ

ಗದಗ ಕೆ.ಎಚ್.ಪಾಟೀಲ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಸಹಾಯಕ ಪ್ರಾಧ್ಯಾಪಕರಾದ ಡಾ.ಅರವಿಂದ ಕರಿನಾಗಣ್ಣವರ ಉಪನ್ಯಾಸ ನೀಡಲಿದ್ದಾರೆ.

ರೋಣದ ಜೀವನ ಬೆಳಕು ಕಲಾ ತಂಡದ ರಾಜಶೇಖರ ಹಿರೇಮಠ ಜಾಗೃತಿ ಗೀತೆಗಳನ್ನು ಪ್ರಸ್ತುತಪಡಿಸಲಿದ್ದಾರೆ.

ಕರ್ನಾಟಕ ಯೋಜನೆ ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಕಾರ್ಯದರ್ಶಿಗಳು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ ಕಾರ್ಯದರ್ಶಿ ಮಹೇಶ ಎನ್.ಎಸ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ವಸಂತ ಬಿ ಮಡ್ಲೂರ ಸ್ವಾಗತ ಕೋರಿದ್ದಾರೆ.

### ಡ್ರಗ್ಸ್ ಮತ್ತು ಭಯೋತ್ಪಾದಕಿ ಪತ್ತೆ ಹಚ್ಚುವಲ್ಲಿ ರಾಜ್ಯ ಸರ್ಕಾರ ಸಂಪೂರ್ಣ ವಿಫಲ-ಬಸವರಾಜ ಬೊಮ್ಮಾಯಿ ಆರೋಪ

# ಸರ್ಕಾರದಿಂದ ದೇಶ ದ್ರೋಹಿಗಳಿಗೆ ರಕ್ಷಣೆ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಡ್ರಗ್ಸ್ ಮತ್ತು ಭಯೋತ್ಪಾದಕಿ ಪತ್ತೆ ಹಚ್ಚುವಲ್ಲಿ ರಾಜ್ಯ ಸರ್ಕಾರ ಸಂಪೂರ್ಣ ವಿಫಲವಾಗಿದ್ದು, ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ ಅಧಿಕಾರ ನಡೆಸುವ ಎಲ್ಲ ನೈತಿಕತೆಯನ್ನು ಕಳೆದುಕೊಂಡಿದೆ. ಅವರು ದೇಶದ್ರೋಹಿಗಳಿಗೆ ರಕ್ಷಣೆ ನೀಡುವ ಕೆಲಸ ಮಾಡುತ್ತಿದ್ದಾರೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಆರೋಪಿಸಿದರು.

ನವದೆಹಲಿಯಲ್ಲಿ ಖಾಸಗಿ ಸುದ್ದಿಯೊಂದಿಗೆ ಮಾತನಾಡಿದ ಅವರು, ಕರ್ನಾಟಕದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣ ಹದಗೆಟ್ಟಿದೆ. ಪೊಲೀಸ್ ಇಲಾಖೆ ಅಪರಾಧ ಕೃತ್ಯಗಳನ್ನು ಮಾಡುವವರ ಮೇಲೆ ನಿಯಂತ್ರಣ ಕಳೆದುಕೊಂಡಿದ್ದಾರೆ. ಕಳೆದ ವಾರ ಮಹಾರಾಷ್ಟ್ರ ಪೊಲೀಸರು ಮೈಸೂರಿಗೆ ಬಂದು ಸುಮಾರು 394 ಕೋಟಿ ಮೌಲ್ಯದ ಡ್ರಗ್ಸ್ ವಶಪಡಿಸಿಕೊಂಡಿದ್ದಾರೆ. ನಮ್ಮ ರಾಜ್ಯದ ಗೃಹ ಸಚಿವರು ಡ್ರಗ್ಸ್ ಬಗ್ಗೆ ಯಾವುದೇ ಮಾಹಿತಿ ಇರಲಿಲ್ಲ ಎಂದು ಹೇಳಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

ಇನ್ನೊಂದೆಡೆ ಗುಜರಾತ್ ಎಟಿಎಸ್ ತಂಡ ಆಗಮಿಸಿ ಭಾರತ ಉಪ ಖಂಡದಲ್ಲಿ ಆಲ್ ಖೈದಾ ಸದಸ್ಯೆಯಾಗಿರುವ ಮಹಿಳೆಯನ್ನು ಬಂಧಿಸಿದ್ದಾರೆ. ಆಲ್ ಖೈದಾ ಭಾರತದಲ್ಲಿ ಸ್ಥಾಪನೆಯಾಗಿ ಪಾಕಿಸ್ತಾನದಲ್ಲಿ ಕಾರ್ಯನಿರ್ವಹಿಸುತ್ತಿದೆ.

### ಸ್ವಾಮಿ ವಿವೇಕಾನಂದ ಸಾಂಸ್ಕೃತಿಕ ಸಮಿತಿಯ ಅಧ್ಯಕ್ಷ ಎಂ.ಎನ್. ಕಾಮನಹಳ್ಳಿ ಮಾಹಿತಿ

# ರಜತ ಮಹೋತ್ಸವ ಆಗಸ್ಟ್ 2, 3ಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಆಗಸ್ಟ್ 2 ಮತ್ತು 3ರಂದು ಸ್ವಾಮಿ ವಿವೇಕಾನಂದ ಸಾಂಸ್ಕೃತಿಕ ಸಮಿತಿಯ ರಜತ ಮಹೋತ್ಸವ ಕಾರ್ಯಕ್ರಮ ನಡೆಯಲಿದೆ ಎಂದು ಸಮಿತಿಯ ಅಧ್ಯಕ್ಷ ಎಂ.ಎನ್. ಕಾಮನಹಳ್ಳಿ ಮಾಹಿತಿ ನೀಡಿದರು.





ನಗರದ ಪತ್ರಿಕಾ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಆಗಸ್ಟ್ 2ರಂದು ಬೆಳಿಗ್ಗ 6ರಿಂದ 7ರವರೆಗೆ ರುದ್ರಾಭಿಷೇಕ, 7ರಿಂದ ರುದ್ರಹೋಮ, 11ರಿಂದ 1 ಗಂಟೆಗೆ ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯಕ್ರಮ, ಮಧ್ಯಾಹ್ನ 3ರಿಂದ ಮಹಿಳೆಯರಿಗೆ ರಂಗೋಲಿ ಸ್ಪರ್ಧೆ, ಸಾಯಂಕಾಲ 4ರಿಂದ ಮಹಿಳೆಯರಿಗೆ ಅಡುಗೆ ಸ್ಪರ್ಧೆಗಳು ನಡೆಯಲಿವೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರೊ. ಎಂ.ಎನ್. ಕಾಮನಹಳ್ಳಿ ವಹಿಸಿಕೊಳ್ಳಲಿದ್ದು, ಅತಿಥಿಗಳಾಗಿ ನಗರಸಭೆ ಸದಸ್ಯೆಯರಾದ ಶ್ವೇತಾ ಬೆನಕನವಾರಿ, ವಿಜಯಲಕ್ಷ್ಮೀ, ನಿವೃತ್ತ ಚಿತ್ರಕಲಾ ಉಪನ್ಯಾಸಕಿ ಪ್ರೇಮಾ ಹಂದಿಗೋಳ ಆಗಮಿಸಲಿದ್ದಾರೆ. ಶಂಕರ ಹಾನಗಲ್ಲ, ಜಿ.ಜಿ. ಕುಲಕರ್ಣಿ, ಎಂ.ಬಿ. ಚನ್ನಪ್ಪಗೌಡರ, ಬಿ.ಎಚ್. ಗರಡಿಮನಿ, ವಿ.ಆರ್. ಕುಲಕರ್ಣಿ, ಕೆ.ಐ. ಕುರುಗೋಡ, ಆರ್.ಬಿ. ಒಡೆಯರ ಉಪಸ್ಥಿತರಿರುವರು. ಅದೇ ದಿನ ಸಾಯಂಕಾಲ 6.30ಕ್ಕೆ ಸ್ಥಳೀಯ ಕಲಾವಿದರಿಂದ 'ಸಂಗೀತ ಸಂಜೆ' ನಡೆಯಲಿದೆ ಎಂದು ತಿಳಿಸಿದರು. ರಜತ ಮಹೋತ್ಸವ ಸಮಾರಂಭ ಹಾಗೂ ಸ್ಮರಣ ಸಂಚಿಕೆ ಬಿಡುಗಡೆ ಕಾರ್ಯಕ್ರಮ ಆ. 3ರಂದು ನಡೆಯಲಿದ್ದು, ದಿವ್ಯ ಸಾನ್ನಿಧ್ಯವನ್ನು ಧಾರವಾಡ ಮುರಘಾಮಠದ ಪೂಜ್ಯ ಶ್ರೀ ಮ.ನಿ.ಪ್ರ. ಡಾ. ಮಲ್ಲಿಕಾರ್ಜುನ ಮಹಾಸ್ವಾಮಿಗಳು ವಹಿಸಿಕೊಳ್ಳಲಿದ್ದಾರೆ. ಉದ್ಘಾಟನೆಯನ್ನು ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ನೆರವೇರಿಸಲಿದ್ದು, ವಿ.ಪ ಸದಸ್ಯ ಎಸ್.ವಿ. ಸಂಕನೂರಸ್ಮರಣ ಸಂಚಿಕೆ ಲೋಕಾರ್ಪಣೆಗೊಳಿಸುವರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರೊ. ಎಂ.ಎನ್. ಕಾಮನಹಳ್ಳಿ ವಹಿಸಿಕೊಳ್ಳಲಿದ್ದಾರೆ. ಮುಖ್ಯ ಅತಿಥಿಗಳಾಗಿ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಜಾನಪದ ವಿದ್ವಾಂಸರಾದ ಡಾ. ಶಂಭು ಬಳಿಗಾರ ಆಗಮಿಸಲಿದ್ದು, ಅತಿಥಿ ಸ್ಥಾನವನ್ನು ಮಾಜಿ ಶಾಸಕ ಡಿ.ಆರ್. ಪಾಟೀಲ್ ವಹಿಸಿಕೊಳ್ಳಲಿದ್ದಾರೆ ಎಂದು ತಿಳಿಸಿದರು.

> ಮಧ್ಯಮ ವರ್ಗದವರಿಗೆ ಹಾಗೂ ಧಾರ್ಮಿಕ ಚಿಂತನೆಗಳಿಗೆ ಕಡಿಮೆ ದರದಲ್ಲಿ ಬಾಡಿಗೆ ನೀಡುತ್ತಾ ಸಮಾಜಮುಖಿ ಕಾರ್ಯಕ್ರಮಗಳನ್ನು ಸಮಿತಿಯಿಂದ ಮಾಡಿಕೊಂಡು ಬರಲಾಗಿದೆ. ಕಡಿಮೆ ದರದಲ್ಲಿ ಬಡವರಿಗೆ ಉಪಯುಕ್ತ ಕಾರ್ಯಕ್ರಮ ಮಾಡುತ್ತಿದ್ದೇವೆ. ಕರೋನಾ ಸಮಯದಲ್ಲಿ ಸಂಕ್ಷಿಪ್ತ ವಿವಾಹ ಕಾರ್ಯಕ್ರಮಗಳನ್ನು ಮಾಡಿದ್ದೇವೆ. 25 ವರ್ಷದಿಂದ ಸಾಂಸ್ಕೃತಿಕ ಸಮಿತಿ ವಿಶೇಷ ಸಾಧನೆ ಮಾಡಿಕೊಂಡು ಬಂದಿದೆ.
> - ಬಿ.ಎಚ್. ಗರಡಿಮನಿ. ಸಮಿತಿ ಸಲಹೆಗಾರರು.

ಈ ಸಂದರ್ಭದಲ್ಲಿ ಎಂ.ಬಿ ಚೆನ್ನಪ್ಪಗೌಡ್ರ, ಕೆ.ಐ. ಕುರುಗೋಡ, ರಂಗಪ್ಪ ಒಡೆಯರ ಉಪಸ್ಥಿತರಿದ್ದರು.

# ಇಂಜಿನಿಯರ್ ವಿ.ಎನ್. ಪಾಟೀಲರಿಗೆ ಬೀಳ್ಕೊಡುಗೆ



■ ವಿಜಯಸಾಕ್ಷಿ ಸುದ್ದಿ, ಗದಗ

ಲೋಕೋಪಯೋಗಿ ಇಲಾಖೆಯ ಗದಗ ವಿಭಾಗದಲ್ಲಿ ಕಾರ್ಯಪಾಲಕ ಅಭಿಯಂತರ ವಿ.ಎನ್. ಪಾಟೀಲರ ವರ್ಗಾವಣೆ ನಿಮಿತ್ತ ಬೀಳ್ಕೊಡುಗೆ ಸಮಾರಂಭವನ್ನು ನಗರದ ಪರಿವೀಕ್ಷಣಾ ಮಂದಿರದಲ್ಲಿ ಏರ್ಪಡಿಸಲಾಗಿತ್ತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾರ್ಯ ನಿರ್ವಾಹಕ ಇಂಜಿನಿಯರ್ (ಪ್ರಭಾರ) ನಿಂಗನಗೌಡ ಎನ್.ಪಾಟೀಲ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಸ.ಕಾ.ನಿ.ಇಂಜಿನಿಯರ್ ಎಂ.ಎಸ್. ಪಾಟೀಲ, ರೋಣ ಸ.ಕಾ.ನಿ.ಇಂ ಜಿ.ಎಸ್. ಪಾಟೀಲ, ಮುಂಡರಗಿ ಸ.ಕಾ.ನಿ.ಇಂ. ಹೆಚ್. ಬಸವರಾಜ, ಶಿರಹಟ್ಟಿ ಸ.ಕಾ.ನಿ.ಇಂ ಎಫ್.ಎಚ್. ತಿಮ್ಮಾಪುರ, ನರಗುಂದ ಸ.ಕಾ.ನಿ.ಇಂ ಪ್ರಭು ಹುನಗುಂದ, ಗದಗ ಜಿಲ್ಲಾ ಗುತ್ತಿಗೆದಾರರ ಸಂಘದ ಅಧ್ಯಕ್ಷ ಸಿದ್ದು ಕೆ. ಪಾಟೀಲ ಉಪಸ್ಥಿತರಿದ್ದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಇಂ. ವಿ.ಎನ್. ಪಾಟೀಲ, ತಮಗೆ ಸಹಕಾರ ನೀಡಿದ ಎಲ್ಲರಿಗೂ ಧನ್ಯವಾದಗಳನ್ನು ತಿಳಿಸಿದರು. ಇಂ. ಪ್ರಿಯಾ ಭಜಂತ್ರಿ ಸ್ವಾಗತಿಸಿದರು. ಪ್ರಕಾಶ ಮುದಗಲ್ಲ ನಿರೂಪಿಸಿದರು.

ಈ ಸಂದರ್ಭದಲ್ಲಿ ತಾಂತ್ರಿಕ ಸಹಾಯಕ ಸಿ. ಮಲ್ಲಿಕಾರ್ಜುನ, ಶರಣಪ್ಪ ದದೇಗಲ್, ಎಫ್.ಬಿ. ಆಟಗಾಳಿ, ಎಂ.ಎಚ್. ಕರದೇಗೌಡರ, ಮಹೇಶ್ವರಪ್ಪ ಗೊಜನೂರ, ಎಫ್.ಎಂ. ಅಣ್ಣಿಗೇರಿ ಉಪಸ್ಥಿತರಿದ್ದರು. ಕೊನೆಯಲ್ಲಿ ಪ್ರಿಯಾ ಭಜಂತ್ರಿ ವಂದಿಸಿದರು.

**ಶ್ರೀ ಸಿದ್ಧಾರೂಢ ಕಥಾಮೃತ ಪುರಾಣ ಪ್ರವಚನ ಪ್ರಾರಂಭೋತ್ಸವದಲ್ಲಿ ಶ್ರೀ ಚನ್ನವೀರ ಮಹಾಸ್ವಾಮಿಗಳು**

# ಪುರಾಣ ಶ್ರವಣದಿಂದ ಪುಣ್ಯ ಪ್ರಾಪ್ತಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶ್ರಾವಣದ ಶ್ರೇಷ್ಠ ಕಾಲದಲ್ಲಿ ದೇವಮಾನವರು, ಮಹಾತ್ಮರು, ಶರಣರು, ಸಂತರು, ಪುಣ್ಯ ಪುರುಷರ ಪುರಾಣ ಪ್ರವಚನ ಕೇಳುವುದರಿಂದ ಮನುಷ್ಯನ ದುಃಖ-ದುಮ್ಮಾನ, ಕಷ್ಟ-ಕಾರ್ಪಣ್ಯ, ಪಾಪ ಕರ್ಮಗಳು ಕಳೆದು ಶಾಂತಿ, ನೆಮ್ಮದಿ, ಪುಣ್ಯ ಪ್ರಾಪ್ತಿಯಾಗುತ್ತದೆ ಮತ್ತು ಸದ್ವಿಚಾರ, ಸದ್ಗುಣಗಳನ್ನು ಹೊಂದಲು ಸಾಧ್ಯವಾಗುತ್ತದೆ ಎಂದು ಹೂವಿನಶಿಗ್ಲಿ ವಿರಕ್ತಮಠದ ಶ್ರೀ ಚನ್ನವೀರ ಮಹಾಸ್ವಾಮಿಗಳು ಹೇಳಿದರು.

ಅವರು ಬುಧವಾರ ಪಟ್ಟಣದ ಶ್ರೀ ಸೋಮೇಶ್ವರ ಪುರಾಣ ಸೇವಾ ಸಮಿತಿಯಿಂದ ಹಮ್ಮಿಕೊಂಡಿರುವ ಶ್ರೀ ಸಿದ್ಧಾರೂಢ ಕಥಾಮೃತ ಪುರಾಣ ಪ್ರವಚನ ಪ್ರಾರಂಭೋತ್ಸವದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಬದುಕಿನ ಜಂಜಾಟದ ನಡುವೆ ಧರ್ಮಕಾರ್ಯ, ಸತ್ಸಂಗ, ಪುರಾಣ-ಪುಣ್ಯಕಥೆ ಆಲಿಸುವುದರಿಂದ ಸಾರ್ಥಕ ಬದುಕಿನ ಮಾರ್ಗ ತೆರೆದುಕೊಳ್ಳುತ್ತದೆ. ತಾಂತ್ರಿಕ ಜಮಾನಾ, ಧಾರಾವಾಹಿಗಳ ದುನಿಯಾದಲ್ಲಿ ಧಾರ್ಮಿಕ ನಂಬಿಕೆ, ಆಚರಣೆ ಮತ್ತು ಸಂಸ್ಕೃತಿ ಮರೆಯುತ್ತಿರುವುದು ದುರ್ದೈವದ ಸಂಗತಿ. ನಮ್ಮ ನೆಲದ ಶ್ರೇಷ್ಠತಮವಾದ ಧರ್ಮ, ಸಂಸ್ಕೃತಿ ಆಚಾರ-ವಿಚಾರಗಳನ್ನು ಉಳಿಸಿಕೊಂಡು ಹೋಗುವ ನಿಟ್ಟಿನಲ್ಲಿ ಪುರಾಣ-ಪಠಣ ಕಾರ್ಯಕ್ರಮಗಳು ಅವಶ್ಯ. ಐತಿಹಾಸಿಕ ಪ್ರಸಿದ್ಧ ಶ್ರೀ ಸೋಮೇಶ್ವರ ದೇವರ ಈ ಭಾಗದ ಭಕ್ತರ ಕಷ್ಟ-ಕಾರ್ಪಣ್ಯ ಕಳೆಯಲು ಪತ್ನಿ ಪಾರ್ವತಿ ಸಮೇತನಾಗಿ ಧರೆಗಿಳಿದು ಬಂದಿದ್ದಾನೆ. ಪುಲಿಗೆರೆಯ ನಾಡಿನಲ್ಲಿ ಜನಿಸಿರುವ ನಾವೆಲ್ಲ ಧನ್ಯರು. ಎಲ್ಲರೂ ಶ್ರಾವಣ ಮಾಸದುದ್ದಕ್ಕೂ ನಡೆಯುವ ಸೋಮೇಶ್ವರ ಪುರಾಣ ಆಲಿಸಬೇಕು ಎಂದು ಕರೆನೀಡಿದರು.



ಅತಿಥಿಗಳಾಗಿ ಆಗಮಿಸಿದ್ದ ಬಿಸಿಎನ್ ಶಿಕ್ಷಣ ಸಂಸ್ಥೆಯ ನಿರ್ದೇಶಕ ಲೋಹಿತ ನೆಲವಗಿ ಮಾತನಾಡಿ, ಜೀವನದುದ್ದಕ್ಕೂ ಧರ್ಮ, ಪರಂಪರೆ, ಸಂಸ್ಕೃತಿ, ಸಮನ್ವಯತೆ ಹೀಗೆ ಲೋಕಕಲ್ಯಾಣಕ್ಕಾಗಿ ತಮ್ಮನ್ನು ಸಮರ್ಪಿಸಿಕೊಂಡು ಇಂದಿಗೂ ದಾರಿದೀಪವಾಗಿರುವವರು ಲಿಂ.ಶ್ರೀ ಸಿದ್ಧಾರೂಢ ಶರಣರು. ಇಂತವರ ಚರಿತ್ರೆಯನ್ನು ಆಲಿಸುವ ಸೌಭಾಗ್ಯ ದೊರಕಿಸಿರುವ ಇಲ್ಲಿನ ಸಮಿತಿಯವರ ಕಾರ್ಯ ಅಭಿನಂದನಾರ್ಹ. ಸೋಮೇಶ್ವರನ ಪವಿತ್ರ ಸನ್ನಿಧಾನದಲ್ಲಿ ನಡೆಸುತ್ತಿರುವ ಪುರಾಣ ಪ್ರವಚನ ನಿರಂತರವಾಗಿ ಮುನ್ನಡೆಯಲಿ ಎಂದರು.

ಕಾರ್ಯಕ್ರಮ ಉದ್ಘಾಟಿಸಿದ ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ ಮತ್ತು ಸೋಮೇಶ್ವರ ಭಕ್ತರ ಟ್ರಸ್ಟ್‌ನ ಬಸವೇಶ ಮಹಾಂತಶೆಟ್ಟರ ಮಾತನಾಡಿ, ಶ್ರಾವಣ ಮಾಸದಲ್ಲಿ ಸತ್ಪುರುಷರ ವಿಚಾರಗಳನ್ನು ಆಲಿಸುವುದು ಮತ್ತು ಅವರ ಮೌಲ್ಯಗಳನ್ನು ಬದುಕಿನಲ್ಲಿ ಅಳವಡಿಸಿಕೊಳ್ಳುವುದರಿಂದ ಜೀವನ ಪಾವನವಾಗುತ್ತದೆ. ಕಳೆದ 13 ವರ್ಷಗಳಿಂದ ದೇವಸ್ಥಾನದಲ್ಲಿ ಪುರಾಣ ಪ್ರವಚನ ನಡೆಸುತ್ತಾ ಬರುತ್ತಿರುವ ಸಮಿತಿಯವರ ಕಾರ್ಯ ಅಭಿನಂದನಾರ್ಹ ಎಂದರು.

ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್‌ನ ಅಧ್ಯಕ್ಷ ಗುರಣ್ಣ ಪಾಟೀಲ ಕುಲಕರ್ಣಿ ಅಧ್ಯಕ್ಷತೆ ವಹಿಸಿ ಪುರಾಣ ಸಮಿತಿಗೆ ಅಭಿನಂದನೆ ಸಲ್ಲಿಸಿದರು. ಈ ವೇಳೆ ಚಂಬಣ್ಣ ಬಾಳಿಕಾಯಿ, ಎಸ್.ಎಫ್ ಆದಿ, ಸುರೇಶ ರಾಚನಾಯ್ಕರ, ಚನ್ನಪ್ಪ ಜಗಲಿ, ಶಂಕರ ಬಾಳಿಕಾಯಿ, ವಿರೂಪಾಕ್ಷ ಆದಿ, ಮಯೂರ ಪಾಟೀಲ, ನಂದೀಶ ಬಂಡಿವಾಡ, ಬಸವರಾಜ ಮೆಣಸಿನಕಾಯಿ, ಎನ್.ಆರ್. ಸಾತಪುತೆ, ಕಾಶಪ್ಪ ಮುಳಗುಂದ, ಶಿವಪುತ್ರಪ್ಪ ಚಾಕಲಬ್ಬಿ, ಅರ್ಚಕ ಸಮೀರ ಪೂಜಾರ ಮುಂತಾದವರಿದ್ದರು.

ಜಯಪ್ರಕಾಶ ಹೊಟ್ಟಿ, ಸೋಮಶೇಖರ ಕೆರಿಮನಿ, ಜಿ.ಎಸ್. ಗುಡಗೇರಿ ನಿರ್ವಹಿಸಿದರು. ಡಾ. ಪಂಡಿತ ಪುಟ್ಟರಾಜ ಗವಾಯಿಗಳ ಶಿಷ್ಯ ಪಂ. ಗುರುಶಾಂತಯ್ಯ ಶಾಸ್ತ್ರಿ ಆರಾಧ್ಯಮಠ ಗವಾಯಿಗಳು ಪುರಾಣ ಪಠಣ-ಪ್ರವಚನಗೈದರೆ, ವಿಜಯಕುಮಾರ ಸುತಾರ ತಬಲಾ ಸಾಥ್ ನೀಡಿದರು.

ಆಗಸ್ಟ್ 24 ವರೆಗೆ ನಿತ್ಯ ಸಂಜೆ 7ಕ್ಕೆ ಪುರಾಣ ಕಾರ್ಯಕ್ರಮ ಜರುಗಲಿದ್ದು, ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಪುನೀತರಾಗಬೇಕೆಂದು ಸೋಮೇಶ್ವರ ಪುರಾಣ ಸೇವಾ ಸಮಿತಿ ತಿಳಿಸಿದೆ.

# ಪ್ರಸಾದ ನಿಲಯದ ಉದ್ಘಾಟನೆ ನಾಳೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಮುಕ್ತಿಮಂದಿರ ಧರ್ಮಕ್ಷೇತ್ರದಲ್ಲಿ ನೂತನವಾಗಿ ನಿರ್ಮಿಸಿರುವ ಶ್ರೀರಂಭಾಪುರಿ ಲಿಂ.ಜಗದ್ಗುರು ವೀರಗಂಗಾಧರ ಪ್ರಸಾದ ನಿಲಯದ ಉದ್ಘಾಟನೆ ಸಮಾರಂಭ ಆಗಸ್ಟ್ 2ರಂದು ಬೆಳಿಗ್ಗೆ 11ಕ್ಕೆ ಜರುಗಲಿದ್ದು, ಈ ಕುರಿತು ಕ್ಷೇತ್ರದ ಪಟ್ಟಾಧ್ಯಕ್ಷರಾದ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯ ಸ್ವಾಮೀಜಿ ಮಾಹಿತಿ ನೀಡಿದರು.



ಮುಕ್ತಿಮಂದಿರದಲ್ಲಿ ಈಗಾಗಲೇ ತ್ರಿಕೋಟಿ ಶಿವಲಿಂಗ ಸ್ಥಾಪನಾ ಕಾರ್ಯ ಭರದಿಂದ ಸಾಗಿದ್ದು, ಕ್ಷೇತ್ರಕ್ಕೆ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಬಂದು ಹೋಗುತ್ತಿದ್ದಾರೆ. ಬರುವ ಭಕ್ತರಿಗಾಗಿ ಪ್ರಸಾದ ನಿಲಯ ಆರಂಭಿಸಲಾಗಿದೆ. ಇನ್ನು ಮುಂದೆ ಪ್ರತಿದಿನ ಕ್ಷೇತ್ರದಲ್ಲಿ ಅನ್ನಪ್ರಸಾದದ ವಿತರಣೆ ನಡೆಯಲಿದೆ. ಸಮಾರಂಭದ ನೇತೃತ್ವವನ್ನು ನೊಣವಿನಕೆರೆ ಕಾಡಸಿದ್ಧೇಶ್ವರಮಠದ ಡಾ. ಕರಿವೃಷಭ ದೇಶೀಕೇಂದ್ರ ಶಿವಯೋಗಿ ಸ್ವಾಮೀಜಿ ವಹಿಸಿಕೊಳ್ಳಲಿದ್ದಾರೆ. ಎಮ್ಮಿಗನೂರಿನ ವಾಮದೇವ ಮಹಾಂತ ಶಿವಾಚಾರ್ಯ ಸ್ವಾಮೀಜಿ, ಕಲಾದಗಿ ಪಂಚಗ್ರಹ ಹಿರೇಮಠದ ಗಂಗಾಧರ ಶಿವಾಚಾರ್ಯ ಸ್ವಾಮೀಜಿ ಅವರ ಸಮ್ಮುಖದಲ್ಲಿ ಪ್ರಸಾದ ನಿಲಯದ ಉದ್ಘಾಟನೆ ನಡೆಯುವುದು.

ರಾಜ್ಯ ಕಾನೂನು ಮತ್ತು ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ ಪ್ರಸಾದ ನಿಲಯ ಉದ್ಘಾಟಿಸುವರು. ರಾಜ್ಯ ಗಣಿ ಮತ್ತು ಭೂವಿಜ್ಞಾನ ಸಚಿವ ಎಸ್.ಎಸ್. ಮಲ್ಲಿಕಾರ್ಜುನ, ಸಂಸದ ಬಸವರಾಜ ಬೊಮ್ಮಾಯಿ, ಶಾಸಕರಾದ ಡಾ. ಚಂದ್ರು ಲಮಾಣಿ, ಎ.ಆರ್. ಪಾಟೀಲ, ಜಿ.ಎಸ್. ಪಾಟೀಲ, ಶ್ರೀನಿವಾಸ ಮಾನೆ, ಯಾಸೀರ್ ಅಹಮ್ಮದ್ ಪಠಾಣ, ವಿ.ಪ ಸದಸ್ಯ ಎಸ್.ವಿ. ಸಂಕನೂರ, ಮಾಜಿ ಶಾಸಕರಾದ ಜಿ.ಎಸ್. ಗಡ್ಡದೇವರಮಠಮ, ಜಿ.ಎಂ. ಮಹಾಂತಶೆಟ್ಟರ, ಎಂ.ಎಸ್. ಅಕ್ಕಿ, ಕುಸುಮಾವತಿ ಶಿವಳ್ಳಿ, ರಾಮಕೃಷ್ಣ ದೊಡ್ಡಮನಿ, ರಾಮಣ್ಣ ಲಮಾಣಿ, ಆನಂದಸ್ವಾಮಿ ಗಡ್ಡದೇವರಮಠ ಸೇರಿದಂತೆ ಅನೇಕ ಮುಖಂಡರು ಆಗಮಿಸುವರು. ಕಾರ್ಯಕ್ರಮದಲ್ಲಿ ಖ್ಯಾತ ವೈದ್ಯರಾದ ಡಾ.ಸುಮನ್ ಸೇರಿದಂತೆ ಸಾಧಕರನ್ನು ಸನ್ಮಾನಿಸಲಾಗುವುದು ಎಂದು ತಿಳಿಸಿದರು.

**ಶಿರಹಟ್ಟಿ ತಾಲೂಕಿನ ವಿವಿಧ ಗ್ರಾಮಗಳಿಗೆ ಸಿಇಓ ಭರತ್ ಎಸ್ ಭೇಟಿ**

# ಜೆಜೆಎಂ ಕಾಮಗಾರಿಗಳ ಪರಿಶೀಲನೆ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಕಳೆದ ಮೂರು-ನಾಲ್ಕು ದಿನಗಳಿಂದ ಜಿಲ್ಲೆಯಾದ್ಯಂತ ಸಂಚಾರ ನಡೆಸಿರುವ ಜಿಲ್ಲಾ ಪಂಚಾಯಿತಿ ಸಿಇಒ ಭರತ್ ಎಸ್, ಸರ್ಕಾರದ ವಿವಿಧ ಕಾಮಗಾರಿಗಳು, ಯೋಜನೆಗಳ ಅನುಷ್ಠಾನ ಹಾಗೂ ಮೂಲ ಸೌಕರ್ಯಗಳಿಗೆ ಸಂಬಂಧಿಸಿದಂತೆ ಪರಿಶೀಲನೆ ನಡೆಸಿದರು.

ಗುರುವಾರ ಶಿರಹಟ್ಟಿ ತಾಲೂಕು ಮಜ್ಜೂರ ಹಾಗೂ ಮಾಚೇನಹಳ್ಳಿ ಗ್ರಾ.ಪಂ ವ್ಯಾಪ್ತಿಯಲ್ಲಿ ಜಲ ಜೀವನ್ ಮಿಷನ್ ಯೋಜನೆಯಡಿ ಪೂರ್ಣಗೊಂಡ ಕಾಮಗಾರಿಗಳನ್ನು ಪರಿಶೀಲಿಸಿದರು. ಮಜ್ಜೂರ, ಶಿವಾಜಿ ತಾಂಡಾ, ಮಾಚೇನಹಳ್ಳಿ, ತೆಗ್ಗಿನ ಭಾವನೂರ, ನವಭಾವನೂರ ಗ್ರಾಮಗಳಿಗೆ ಅನಿರೀಕ್ಷಿತ ಭೇಟಿ ನೀಡಿ, ಜೆಜೆಎಂ ಕಾಮಗಾರಿಗಳು, ಸಂಪರ್ಕಗಳ ಗುಣಮಟ್ಟ, ಮೀಟರ್ ಅಳವಡಿಕೆ, ರಸ್ತೆ ಪುನಶ್ಚೇತನ, ನೀರಿನ ಗುಣಮಟ್ಟ, ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿಗಳ ಕಾರ್ಯ ನಿರ್ವಹಣೆ ಕುರಿತು ವಿವರವಾದ ಪರಿಶೀಲನೆ ನಡೆಸಿದರು. ಇದೇ ಸಂದರ್ಭದಲ್ಲಿ ಮನೆಗಳಿಗೆ ಅಳವಡಿಸಲಾಗಿರುವ ನಳಗಳ ಸಂಪರ್ಕದ ಬಗ್ಗೆ ಫಲಾನುಭವಿಗಳೊಂದಿಗೆ ಚರ್ಚಿಸಿದರು. ಗುಣಮಟ್ಟದ ಕಾಮಗಾರಿ ಕೈಗೊಳ್ಳುವಲ್ಲಿ ಅಧಿಕಾರಿಗಳು ಮತ್ತು ಗುತ್ತಿಗೆದಾರರ ಜವಾಬ್ದಾರಿ ಎಷ್ಟಿದೆಯೋ ಕಾಮಗಾರಿ ಗುಣಮಟ್ಟ ಕಾಪಾಡಿಕೊಳ್ಳುವುದು, ಸದುಪಯೋಗ ಪಡೆದುಕೊಳ್ಳುವ ಜವಾಬ್ದಾರಿ ಸಾರ್ವಜನಿಕರ ಮೇಲೂ ಇದೆ. ಹೀಗಾಗಿ ಸಾರ್ವಜನಿಕರು ಸರ್ಕಾರದ ಭಾಗವಾಗಿ ಜವಾಬ್ದಾರಿಗಳನ್ನು ನಿಭಾಯಿಸಬೇಕು. ಕಾಮಗಾರಿಗಳು ಗುಣಮಟ್ಟದಿಂದ ಆಗುವಂತೆ ನೋಡಿಕೊಳ್ಳಬೇಕಲ್ಲದೇ ಪೂರ್ಣಗೊಂಡಿರುವ ಕಾಮಗಾರಿಗಳಿಂದ ಸದುಪಯೋಗ ಪಡೆದುಕೊಳ್ಳಬೇಕೆಂದರು.




ಈ ಸಂದರ್ಭದಲ್ಲಿ ಶಿರಹಟ್ಟಿ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ರಾಮಣ್ಣ ದೊಡ್ಡಮನಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಕಾರ್ಯಪಾಲಕ ಇಂಜಿನಿಯರ್ ರಾಘವೇಂದ್ರ ದೊಡ್ಡಮನಿ, ಸಹಾಯಕ ಇಂಜಿನಿಯರ್ ಮಲ್ಲಿಕಾರ್ಜುನ ಪಾಟೀಲ, ವಿಭಾಗೀಯ ಅಧಿಕಾರಿ ಮುನ್ನಿ ಹರಕುನಿ, ಗ್ರಾ.ಪಂ ಅಧ್ಯಕ್ಷರು, ಸದಸ್ಯರು, ಅಭಿವೃದ್ಧಿ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಲೋಕಾಯುಕ್ತ ಪೊಲೀಸರ ಕಾರ್ಯಾಚರಣೆ: ಲಂಚ ಪಡೆಯುತ್ತಿದ್ದ ಹೆಸ್ಕಾಂ ಗುತ್ತಿಗೆದಾರನ ಬಂಧನ

■ ವಿಜಯಸಾಕ್ಷಿ ಸುದ್ದಿ, ಗದಗ

ಜಮೀನಿನ ಪಂಪ್‌ಸೆಟ್ ಆರ್ ಆರ್ ನಂಬರ್ ಮಾಡಿಕೊಡಲು ಸರಕಾರಿ ಶುಲ್ಕಕ್ಕಿಂತ ಹೆಚ್ಚುವರಿ ಹಣ ಕೇಳಿದ್ದ ಹೆಸ್ಕಾಂ ಗುತ್ತಿಗೆದಾರನೊಬ್ಬ ಲೋಕಾಯುಕ್ತರ ಬಲೆಗೆ ಬಿದ್ದ ಘಟನೆ ಜರುಗಿದೆ.

ಹೆಸ್ಕಾಂ ಗುತ್ತಿಗೆದಾರ ಜಿಲ್ಲೆಯ ಮುಂಡರಗಿ ತಾಲೂಕಿನ ಕಲಕೇರಿ ಗ್ರಾಮದ ಸಿದ್ದನಗೌಡ ಪಾಟೀಲ ಲೋಕಾಯುಕ್ತ ಪೊಲೀಸರ ಬಲೆಗೆ ಬಿದ್ದ ವ್ಯಕ್ತಿ.




ಮುಂಡರಗಿ ತಾಲೂಕಿನ ಜಂತ್ಲಿ ಶಿರೂರು ಗ್ರಾಮದ ಬಿ ಕೆ ಗೌರಿ ಎಂಬುವವರ ಸಂಬಂಧಿಕರ ಜಮೀನಿನ ಪಂಪ್‌ಸೆಟ್ ಗೆ ಆರ್.ಆರ್. ನಂಬರ್ ಮಾಡಿಕೊಡಲು ಹೆಸ್ಕಾಂ ಗುತ್ತಿಗೆದಾರ ಸಿದ್ದನಗೌಡ ಪಾಟೀಲ ಸರ್ಕಾರಿ ಶುಲ್ಕಕ್ಕಿಂತ ಹೆಚ್ಚುವರಿಯಾಗಿ ನಾಲ್ಕು ಸಾವಿರ ಲಂಚ ಕೇಳಿದ್ದರು ಎನ್ನಲಾಗಿದೆ.

ಈ ಕುರಿತು ಬಿ.ಕೆ. ಗೌರಿ ಗದಗ ಲೋಕಾಯುಕ್ತ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದರು.

ಲೋಕಾಯುಕ್ತ ಡಿವೈಎಸ್ಪಿ ವಿಜಯ ಬಿರಾದಾರ ನೇತೃತ್ವದಲ್ಲಿ ಸಿಬ್ಬಂದಿ ದಾಳಿ ಮಾಡಿ ಹೆಸ್ಕಾಂ ಗುತ್ತಿಗೆದಾರನನ್ನು ಬಂಧಿಸಿದ್ದಾರೆ.

ಈ ಕುರಿತು ಲೋಕಾಯುಕ್ತ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಅನುಪಯುಕ್ತ ಪೀಠೋಪಕರಣ, ಸಾಮಗ್ರಿಗಳ ವಿಲೇವಾರಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ (ಮ)ಯ ಉಗ್ರಾಣದಲ್ಲಿರುವ ಮತ್ತು ವಿವಿಧ ವಿಭಾಗಗಳಲ್ಲಿರುವ ಅನುಪಯುಕ್ತ ಉಪಕರಣ, ಪೀಠೋಪಕರಣ ಹಾಗೂ ಕಚೇರಿಯ ಸಾಮಗ್ರಿಗಳನ್ನು ಬಹಿರಂಗ ಹರಾಜಿನ ಮೂಲಕ ವಿಲೇವಾರಿಯನ್ನು ಶ್ರೀ ಕೆ.ಎಚ್.ಪಾಟೀಲ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆ, ಬೆಟಗೇರಿ ಇಲ್ಲಿ ಆಗಸ್ಟ್ 13 ರಂದು ಮುಂಜಾನೆ 11 ಗಂಟೆಗೆ ಕೈಗೊಳ್ಳಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಪ್ರಾಚಾರ್ಯರು, ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆ (ಮ), ಗದಗ- ಬೆಟಗೇರಿ -582 102 ಇಲ್ಲಿ ಸಂಪರ್ಕಿಸಬಹುದಾಗಿದೆ.

# ಎಲ್ಲ ಕೇಂದ್ರಗಳೂ ಹುಲಕೋಟಿಗೆ ವರ್ಗಾವಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಹೊಂಬಳ ಗ್ರಾಮಕ್ಕೆ ಮಂಜೂರಾಗಿದ್ದ ಜಿಲ್ಲಾ ಕೃಷಿ ತರಬೇತಿ ಕೇಂದ್ರವನ್ನು ಸದ್ದಿಲ್ಲದೇ ಹುಲಕೋಟಿ ಗ್ರಾಮದ ಕೆವಿಕೆಗೆ ಸ್ಥಳಾಂತರಿಸಲಾಗಿದೆ. ಈ ಬಗ್ಗೆ ಭೂಮಿ ವರ್ಗಾವಣೆ ಪ್ರಕ್ರಿಯೆಯೂ ನಡೆದಿದೆ. ಇದರ ಹಿಂದೆ ಜಿಲ್ಲಾ ಉಸ್ತುವಾರಿ ಸಚಿವರ ಕೈವಾಡವಿದೆ ಎಂದು ಬಿಜೆಪಿ ಯುವ ಮುಖಂಡ ವಸಂತ ಪಡಗದ ಆರೋಪಿಸಿದ್ದಾರೆ.



ಈ ಕುರಿತು ಪ್ರಕಟಣೆ ನೀಡಿರುವ ಅವರು, ಹೊಂಬಳ ಭಾಗದಲ್ಲಿ ಕೃಷಿ ಇಲಾಖೆಗೆ ಸಂಬಂಧಿಸಿದ 50 ಎಕರೆಗೂ ಅಧಿಕ ಜಮೀನು ಇದೆ. ಹೊಂಬಳ ಭಾಗದಲ್ಲಿ ಹೆಸರು, ಶೇಂಗಾ, ಹತ್ತಿ, ಕಡಲೆ, ಕುಸುಬೆ ಹಾಗೂ ಗೋಧಿ ಬೆಳೆಗಳನ್ನು ಅಧಿಕವಾಗಿ ಬೆಳೆಯಲಾಗುತ್ತದೆ. ಈ ಭಾಗದಲ್ಲಿ ಜಿಲ್ಲಾ ಕೃಷಿ ತರಬೇತಿ ಕೇಂದ್ರ ಸ್ಥಾಪನೆ ಸೂಕ್ತವಾಗಿತ್ತು. ಆದರೆ, ಈ ಭಾಗದಲ್ಲಿ ಕಪ್ಪು ಮಣ್ಣು ಇರುವ ಕಾರಣ ಕಟ್ಟಡ ನಿರ್ಮಿಸಲು ಸೂಕ್ತವಲ್ಲ. ಬದಲಾಗಿ ಹುಲಕೋಟಿಯ ಕೃಷಿ ವಿಜ್ಞಾನ ಕೇಂದ್ರದ ಅಗ್ರಿಕಲ್ಚರ್ ಸೈನ್ಸ್ ಫೌಂಡೇಶನ್ ಅಧೀನದಲ್ಲಿನ ಕೃಷಿ ತರಬೇತಿ ಕೇಂದ್ರ ಸ್ಥಾಪಿಸಲು ಸೂಕ್ತ ಆದೇಶ ಹೊರಡಿಸಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲರು ಕೃಷಿ ಇಲಾಖೆಯ ಪ್ರಧಾನ ಕಾರ್ಯದರ್ಶಿಗೆ ಪತ್ರ ಬರೆದಿದ್ದಾರೆ.

ಪತ್ರದ ಆಧಾರದಲ್ಲಿ ಈಗಾಗಲೇ ಜಮೀನು ಹಸ್ತಾಂತರ ಪ್ರಕ್ರಿಯೆಯೂ ನಡೆದಿದೆ. ಜಿಲ್ಲೆಗೆ ಮಂಜೂರಾಗುವ ಎಲ್ಲ ಪ್ರಮುಖ ಕೇಂದ್ರಗಳನ್ನು ಹುಲಕೋಟಿಗೆ ವರ್ಗಾವಣೆ ಮಾಡಿಕೊಳ್ಳುವ ಸಚಿವರು, ಇತರೆ ಗ್ರಾಮಗಳಿಗೆ ಅನ್ಯಾಯ ಎಸಗುತ್ತಿದ್ದಾರೆ ಎಂದು ವಸಂತ ಪಡಗದ ಆರೋಪಿಸಿದ್ದಾರೆ.

**ತಾಲೂಕು ಪಂಚ ಗ್ಯಾರಂಟಿ ಸಮಿತಿ ಮಾಸಿಕ ಪ್ರಗತಿ ಪರಿಶೀಲನಾ ಸಭೆ**

# ಗ್ರಾ.ಪಂ ಮಟ್ಟದಲ್ಲಿ ಪ್ರಗತಿ ಸಾಧಿಸಬೇಕಿದೆ




■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ತಾಲೂಕಿನ ಪ್ರತಿಯೊಬ್ಬ ಅರ್ಹ ಫಲಾನುಭವಿಗೆ ತಲುಪಿಸುವ ಕೆಲಸ ಆಗಬೇಕು ಎಂದು ತಾಲೂಕು ಪಂಚ ಗ್ಯಾರಂಟಿ ಸಮಿತಿ ಅಧ್ಯಕ್ಷ ನಾಗರಾಜ ಮಡಿವಾಳರ ಹೇಳಿದರು.

ಪಟ್ಟಣದ ತಾಲೂಕು ಪಂಚಾಯಿತಿ ಕಾರ್ಯಾಲಯದಲ್ಲಿ ಗುರುವಾರ ನಡೆದ ಯೋಜನೆಯ ಮಾಸಿಕ ಪ್ರಗತಿ ಪರಿಶೀಲನಾ ಸಭೆ ಉದ್ದೇಶಿಸಿ ಅವರು ಮಾತನಾಡಿದರು.

ತಾಲೂಕಿನ ಗ್ರಾಮ ಪಂಚಾಯಿತಿಗಳ ಮಟ್ಟದಲ್ಲಿ ಇನ್ನಷ್ಟು ಪ್ರಗತಿ ಸಾಧಿಸಬೇಕಾಗಿದೆ. ಲಕ್ಷ್ಮೇಶ್ವರದ ಬಸ್ ನಿಲ್ದಾಣದಲ್ಲಿನ ಶೌಚಾಲಯದ ಸ್ವಚ್ಛತೆಗೆ ಆದ್ಯತೆ ನೀಡಲಾಗಿದೆ. ಟೆಂಡರ್ ಮೊತ್ತದ ಆದೇಶದ ಪ್ರಕಾರ ಬಸ್ ನಿಲ್ದಾಣದಲ್ಲಿ ಶೌಚಾಲಯದ ಎದುರು ಕಡ್ಡಾಯವಾಗಿ ಗುತ್ತಿಗೆದಾರರು ದರಪಟ್ಟಿಯನ್ನು ಬರೆದು ಹಾಕಬೇಕು. ಸಾರಿಗೆ ಘಟಕದಲ್ಲಿ ಸಿಬ್ಬಂದಿ ಕೊರತೆ ಸರಿಪಡಿಸಲು ಹಿರಿಯ ಅಧಿಕಾರಿಗಳೊಂದಿಗೆ ಚರ್ಚಿಸಿ ಹೆಚ್ಚಿನ ಸಿಬ್ಬಂದಿ ಕೊಡಲು ಮನವಿ ಮಾಡಿಕೊಂಡಿದ್ದೇನೆ ಎಂದರು.

ಸಂಜೆ ಸಮಯದಲ್ಲಿ ಹುಬ್ಬಳ್ಳಿ ಹಾಗೂ ಹಾವೇರಿ ಕಡೆಯಿಂದ ಲಕ್ಷ್ಮೇಶ್ವರಕ್ಕೆ ಬರಲು ಬಸ್‌ಗಳ ಕೊರತೆ ಇದೆ. ಘಟಕ ವ್ಯವಸ್ಥಾಪಕರು ಈ ಕುರಿತು ಸೂಕ್ತ ಕ್ರಮ ಕೈಗೊಳ್ಳಬೇಕು. ಲಕ್ಷ್ಮೇಶ್ವರದ ಬಸ್ ನಿಲ್ದಾಣದಲ್ಲಿ ಪ್ರಯಾಣಿಕರ ಅನುಕೂಲಕ್ಕಾಗಿ ಇನ್ನಷ್ಟು ಆಸನಗಳ ವ್ಯವಸ್ಥೆ ಮಾಡಬೇಕು ಎಂದು ಸೂಚಿಸಿದರು.

ಬಸ್ ನಿಲ್ದಾಣದಲ್ಲಿ ಖಾಸಗಿ ವಾಹನಗಳು ಎಲ್ಲೆಂದರಲ್ಲಿ ನಿಲ್ಲುತ್ತಿದ್ದು, ಇದರಿಂದಾಗಿ ಪ್ರಯಾಣಿಕರು ಓಡಾಡಲು ಹಾಗೂ ಬಸ್ ಸಂಚಾರಕ್ಕೆ ತೊಂದರೆ ಆಗುತ್ತಿದೆ. ಈ ಕುರಿತು ಅಧಿಕಾರಿಗಳು ಕ್ರಮಕೈಗೊಳ್ಳಬೇಕು ಎಂದು ಗ್ಯಾರಂಟಿ ಸಮಿತಿ ಸದಸ್ಯರು ಆಗ್ರಹಿಸಿದರು. ಸಮಿತಿ ಸದಸ್ಯ ಶಿವರಾಜಗೌಡ ಪಾಟೀಲ, ಗ್ರಾಮೀಣ ಭಾಗದಲ್ಲಿನ ಹಳೆಯ ವಿದ್ಯುತ್ ತಂತಿಗಳನ್ನು ಹೆಸ್ಕಾಂ ಅಧಿಕಾರಿಗಳು ತೆರವುಗೊಳಿಸಬೇಕು ಎಂದು ಆಗ್ರಹಿಸಿದರು.


ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಕೃಷ್ಣಪ್ಪ ಧರ್ಮರ ಮಾತನಾಡಿದರು. ಈ ಸಂದರ್ಭದಲ್ಲಿ ಸಿಡಿಪಿಓ ಮೃತ್ಯುಂಜಯಪ್ಪ ಗುಡ್ಡದನ್ವೇರಿ, ಸಾರಿಗೆ ಘಟಕ ವ್ಯವಸ್ಥಾಪಕಿ ಸವಿತಾ ಆದಿ, ಆಹಾರ ಇಲಾಖೆಯ ಜಗದೀಶ ಕುರುಬರ, ಹೆಸ್ಕಾಂ ಎಇಇ ಆಂಜನೇಯಪ್ಪ, ಯುವನಿಧಿ ಅಧಿಕಾರಿ, ಸಮಿತಿ ಸದಸ್ಯರಾದ ರಮಜಾನಸಾಬ್ ನದಾಫ್, ಕೆ.ಎನ್. ರಿತ್ತಿ, ಕಲ್ಲಪ್ಪ ಗಂಗಣ್ಣವರ, ರಮೇಶ ಬಾರಕೇರ, ಶಶಿಕಲಾ ಬಡಿಗೇರ, ಹಸನ್ ಜಂಗ್ಲಿ ಇದ್ದರು.

# ಹೊಸ ಚಲನಚಿತ್ರ ಚಿತ್ರೀಕರಣ ಆರಂಭ

■ ವಿಜಯಸಾಕ್ಷಿ ಸುದ್ದಿ, ಗದಗ

ಉತ್ತರ ಕರ್ನಾಟಕದ ಸೊಬಗು ಹಾಗೂ ನಮ್ಮ ಆಚರಣೆಗಳಿಗೆ ಪ್ರಮುಖ್ಯತೆ ನೀಡುವ ವಿಭಿನ್ನ ಪ್ರಯತ್ನದೊಂದಿಗೆ ಹೊಸ ಕನ್ನಡ ಚಲನಚಿತ್ರದ ಚಿತ್ರೀಕರಣ ಆರಂಭಗೊಳ್ಳುತ್ತಿದೆ.

ನಮ್ಮ ಹಳ್ಳಿಗಳ ವಾತಾವರಣ ಹಾಗೂ ನಮ್ಮ ಉತ್ತರ ಕರ್ನಾಟಕದ ಜನ ಜೀವನ ಪದ್ಧತಿಯನ್ನು ವಿಶೇಷವಾಗಿ ಚಿತ್ರೀಕರಿಸಲು ನಿರ್ಧರಿಸಲಾಗಿದ್ದು, ಚಿತ್ರದ ನಿರ್ದೇಶಕ ಎಚ್.ವಾಯ್. ಮಿಶನ್ನವರ ಈಗಾಗಲೇ ಗೋಲ್ಡನ್ ಸ್ಟಾರ್ ಗಣೇಶ ಅಭಿನಯದ ಬೊಂಬಾಟ್, ದರ್ಶನ್ ತೂಗುದೀಪ ಅಭಿನಯದ ಅಯ್ಯ ಹಾಗೂ ಅಶ್ವಿನಿ ನಕ್ಷತ್ರ ಎಂಬ ಧಾರಾವಾಹಿಯಲ್ಲಿ ಸಹ ನಿರ್ದೇಶಕರಾಗಿ ಕೆಲಸ ಮಾಡಿದವರಾಗಿದ್ದಾರೆ.



ಸದ್ಯ ರವಿಕುಮಾರ ಗುಡಿಸಾಗರರ ಸಹಾಯದಿಂದ ಈ ಸಿನಿಮಾ ಮಾಡಲು ಮುಂದಾಗಿದ್ದಾರೆ. ಪ್ರಸಕ್ತ ಸಿನಿಮಾ ಉತ್ತರ ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿಯಲ್ಲಿ ನೋಂದಣಿಯಾಗುತ್ತಿದ್ದು, ಮಂಡಳಿಯ ಅಧ್ಯಕ್ಷ ಅನಿಲ ಬಿರಾದರ ಅವರೊಂದಿಗೆ ಮಾತುಕಥೆ ನಡೆಯುತ್ತಿದೆ. ನಟನೆಯಲ್ಲಿ ಆಸಕ್ತಿಯಿರುವವರು 8073225051 ಸಂಖ್ಯೆಗೆ ಕರೆ ಮಾಡಬಹುದು. ಶಶಾಂಕ ಬಾಕಳೆ ಸಹ ನಿರ್ದೇಶಕರಾಗಿ, ರವಿಕುಮಾರ ಗುಡಿಸಾಗರ ಕ್ಯಾಮರಾ ಮನ್ ಆಗಿ ಕೆಲಸ ಮಾಡಲಿದ್ದಾರೆ. ರಾಜಶೇಖರ ಖನ್ನೂರ, ನಾಗರಾಜ ಕಬಾಡಿ, ಪ್ರದೀಪ ಹುಡೇದ, ಗಾಯಕ ಚನ್ನಪ್ಪ ಯಲಿ, ಪ್ರಭುಲಿಂಗ ಶೀಲವಂತರ, ಬಸವರಾಜ ಚಲವಾದಿ ಅವರ ಉಪಸ್ಥಿತಿಯಿದೆ ಎಂದು ಪ್ರಕಟಣೆ ತಿಳಿಸಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka